ವಿಜಯಪುರ | ಸಂಪುಟ 04 | ಸಂಚಿಕೆ 112 | ಪುಟ 04 | ₹ 3.00
https://udayarashminews.com
udayarashmi 90088 88340

# ಉದಯ ರಶ್ಮಿ

Udayarashmi Kannada Daily
ಜನಪರ-ಜೀವಪರ
ಕನ್ನಡ ದಿನಪತ್ರಿಕೆ
ಸಂಪಾದಕ : ಇಂದುಶೇಖರ ಮಣೂರ
Editor: Indushekhar Manur
editor.udayarashmi@gmail.com
RNI NO: KARKAN/2023/86203
ಮಂಗಳವಾರ, ಜೂನ್, 23, 2026

"ವಿಧಾನ ಪರಿಷತ್ ಚುನಾವಣೆಯಲ್ಲಿ ಅಡ್ಡ ಮತದಾನ ಆರೋಪದ ಹಿನ್ನೆಲೆಯಲ್ಲಿ ಬಿಜೆಪಿಯವರು ಧರ್ಮಸ್ಥಳದಲ್ಲಿ ಆಣೆ–ಪ್ರಮಾಣ ಮಾಡಲು ಹೊರಟಿರುವುದು ಅವರ ಪಕ್ಷದ ತೀರ್ಮಾನ. ಆದರೆ, ನಾನು ಶಾಸಕರಿಂದ ಆಣೆ ಪ್ರಮಾಣ ಮಾಡಿಸುವುದಿಲ್ಲ."



■ ಎಚ್.ಡಿ.ಕುಮಾರಸ್ವಾಮಿ
ಕೇಂದ್ರ ಸಚಿವರು

# ದುಡ್ಡು ಕೊಟ್ಟು ಕರೆತಂದ ಕಾಂಗ್ರೆಸ್ ಶಾಸಕರಿಂದಲೇ ಬಿಜೆಪಿ ಹಾಳು!

## ಎಂಎಲ್‌ಸಿ ಚುನಾವಣೆಯಲ್ಲಿ ನಡೆದ ಅಡ್ಡ ಮತದಾನ ಕುರಿತು ಮಾಜಿ ಉಪ ಮುಖ್ಯಮಂತ್ರಿ ಈಶ್ವರಪ್ಪ ಸ್ಫೋಟಕ ಹೇಳಿಕೆ

ಶಿವಮೊಗ್ಗ: ಈ ಹಿಂದೆ ದುಡ್ಡು ಕೊಟ್ಟು ಕರೆತಂದ 17 ಕಾಂಗ್ರೆಸ್ ಶಾಸಕರಿಂದಲೇ ರಾಜ್ಯದಲ್ಲಿ ಬಿಜೆಪಿ ಅಧಿಕಾರಕ್ಕೆ ಬಂದಿತ್ತು. ಆದ–'ರೆ ನಂತರ ಅವರಿಂದಲೇ ಪಕ್ಷ ಹಾಳಾಯ್ತು. ಕಾಂಗ್ರೆಸ್‌ಗೂ ಅದೇ ಪರಿಸ್ಥಿತಿ ಬರಲಿದೆ ಎಂದು ಮಾಜಿ ಉಪ ಮುಖ್ಯಮಂತ್ರಿ ಕೆ.ಎಸ್ ಈಶ್ವರಪ್ಪ ಅವರು ಸೋಮವಾರ ಸ್ಫೋಟಕ ಹೇಳಿಕೆ ನೀಡಿದ್ದಾರೆ.



ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಈಶ್ವರಪ್ಪ, ಇತ್ತೀಚಿಗೆ ಎಂಎಲ್‌ಸಿ ಚುನಾವಣೆಯಲ್ಲಿ ನಡೆದ ಅಡ್ಡ ಮತದಾನದ ಬಗ್ಗೆ ತೀವ್ರ ಆಕ್ರೋಶ ವ್ಯಕ್ತಪಡಿಸಿದರು. ಕರ್ನಾಟಕದಲ್ಲಿ ಎಂ–ಎಲ್‌ಸಿಗಳನ್ನು ಖರೀದಿ ಮಾಡುವ ಕೆಲಸ ನಡೆದಿದೆ. ಇದರಲ್ಲಿ ಎಷ್ಟು ಭ್ರಷ್ಟಾಚಾರ ನಡೆದಿದೆ ಅಂತ ಬಹಿರಂಗವಾಗಬೇಕು ಎಂದು ಆಗ್ರಹಿಸಿದರು.

ಈ ಹಿಂದೆ 17 ಜನ ಕಾಂಗ್ರೆಸ್ ಶಾಸಕರನ್ನು ದುಡ್ಡು ಕೊಟ್ಟು ನಮ್ಮ ಪಕ್ಷಕ್ಕೆ ಕರೆದುಕೊಂಡಿದ್ದೆವು. ಅದ–ರಿಂದ ಬಿಜೆಪಿ ಅಧಿಕಾರಕ್ಕೆ ಬಂತು. ನಂತರ ಪಕ್ಷ ಅವರಿಂದ ಹಾಳಾಗಿ ಹೋಯ್ತು. ಸಾಕಷ್ಟು ಭ್ರಷ್ಟಾಚಾರ ನಡೆದಿದೆ. ಅದು ಹೊರಗೆ ಬರಬೇಕು ಎಂದರು.

ಇನ್ನು ಧರ್ಮಸ್ಥಳದಲ್ಲಿ ಆಣೆ – ಪ್ರಮಾಣ ವಿಚಾರದ ಚರ್ಚೆ ಬಗ್ಗೆ ಪ್ರತಿಕ್ರಿಯಿಸಿದ ಅವರು, ಆಡಳಿತ ಪಕ್ಷ, ವಿರೋಧ ಪಕ್ಷ ರಾಜ್ಯದ ಅಭಿವೃದ್ಧಿ ಬಗ್ಗೆ ಮಾತಾಡಬೇಕಿತ್ತು ಎಂದರು.

ಧರ್ಮಸ್ಥಳ ಪವಿತ್ರವಾದ ಸ್ಥಳ, ಅಲ್ಲಿ ಆಣೆ ಪ್ರಮಾಣ ಬೇಡ. ವಿಜಯೇಂದ್ರ ಅವರು ತಕ್ಷಣ ತಮ್ಮ ನಿಲುವನ್ನ ಹಿಂಪಡೆಯಬೇಕು. ಭಕ್ತಿಯನ್ನ ಒರೆ ಹಚ್ಚುವುದಲ್ಲ, ಹಾಗಾಗಿ ಈ ನಿರ್ಧಾರ ಕೈಬಿಡಬೇಕು. ಧರ್ಮಸ್ಥಳದಲ್ಲಿ ಆಣೆ ಪ್ರಮಾಣ ಮಾಡಿ ಅಣ್ಣಪ್ಪನ ಬಳಿ ಬಂದು ಕ್ಷಮೆ ಕೇಳ್ತಾರೆ. ಈ ಪದ್ಧತಿ ಒಳ್ಳೆಯದಲ್ಲ. ಇದು ನನ್ನ ಸಲಹೆ ಎಂದರು.

## ಸದಾನಂದ ಗೌಡರಿಂದ ಸ್ಫೋಟಕ ಮಾಹಿತಿ ಬಹಿರಂಗ

ಬೆಂಗಳೂರು: ಇತ್ತೀಚಿಗೆ ನಡೆದ ವಿಧಾನ ಪರಿಷತ್ ಚುನಾವಣೆಯಲ್ಲಿ ನಡೆದ ಅಡ್ಡಮತದಾನದಿಂದ ಕಂಗೆಟ್ಟು, ಆಣೆ ಪ್ರಮಾಣದ ಮೊರೆ ಹೋಗಿರುವ ಬಿಜೆಪಿಗೆ ಮಾಜಿ ಮುಖ್ಯಮಂತ್ರಿ ಡಿವಿ ಸದಾನಂದಗೌಡ ಅವರು ಬಿಗ್ ಶಾಕ್ ನೀಡಿದ್ದಾರೆ.



ಪಕ್ಷದೊಳಗಿನ 'ವಿಶ್ವಾಸ ದ್ರೋಹಿ'ಗಳನ್ನು ಪತ್ತೆಹಚ್ಚುವ ವಿಚಾರಕ್ಕೆ ಸಂಬಂಧಿಸಿದಂತೆ ರಾಜ್ಯ ಬಿಜೆಪಿಯಲ್ಲಿ ಆಂತರಿಕ ಭಿನ್ನಮತಕ್ಕೆ ಕಾರಣವಾಗಿದೆ. ಇದರ ಬೆನ್ನಲ್ಲೇ ಕ್ರಾಸ್ ವೋಟಿಂಗ್ ಗೆ ಸಂಬಂಧಿಸಿದಂತೆ 'ಅಪಾರ್ಟ್‌ಮೆಂಟ್ ನಲ್ಲಿ ನಡೆದ ರಹಸ್ಯ ಸಭೆ'ಕುರಿತು ಸದಾನಂದ ಗೌಡ ಅವರು ಅತ್ಯಂತ ಸ್ಫೋಟಕ ಮಾಹಿತಿ ಬಹಿರಂಗಪಡಿಸಿದ್ದಾರೆ. ಅಲ್ಲದೆ ಪಕ್ಷದ ರಾಜ್ಯ ನಾಯಕರ ಉದಾಸೀನತೆಯೇ ಕಾಂಗ್ರೆಸ್ ನ ಐದನೇ ಅಭ್ಯರ್ಥಿ ಗೆಲುವಿಗೆ ಪ್ರಮುಖ ಕಾರಣ ಎಂದು ಅವರು ನೇರವಾಗಿ ಚಾಟಿ ಬೀಸಿದ್ದಾರೆ.

"ಕಾಂಗ್ರೆಸ್ ಐದನೇ ಅಭ್ಯರ್ಥಿಯನ್ನು ಕಣಕ್ಕಿಳಿಸಿದಾಗಲೇ ನಾವು ಎಚ್ಚೆತ್ತುಕೊಳ್ಳಬೇಕಿತ್ತು" ಎಂದು ಮಾತು ಆರಂಭಿಸಿದ ಸದಾನಂದ ಗೌಡ, ತೆರೆಮರೆಯಲ್ಲಿ ನಡೆದ ರಾಜಕೀಯ ಆಪರೇಷನ್‌ನ ಸಂಪೂರ್ಣ ವಿವರವನ್ನು ಬಿಚ್ಚಿಟ್ಟಿದ್ದಾರೆ.

**ಜೂನ್ 13 ರಂದು ನನಗೆ ಹೆಬ್ಬಾಳದ ಪ್ರೆಸ್ಟೀಜ್**

ಅಪಾರ್ಟ್‌ಮೆಂಟ್‌ನಿಂದ ಒಂದು ಕರೆ ಬಂದಿತ್ತು. ಕಾಂಗ್ರೆಸ್‌ನ ನಾಲ್ಕು ಪ್ರಮುಖ ನಾಯಕರು ಮತ್ತು ಬಿಜೆಪಿಯ ಕೆಲ ಶಾಸಕರು ಅಲ್ಲಿ ರಹಸ್ಯ ಸಭೆ ನಡೆಸುತ್ತಿದ್ದಾರೆ ಎಂದು ಆ ವ್ಯಕ್ತಿ ಮಾಹಿತಿ ನೀಡಿದರು. ನಾನು ತಕ್ಷಣವೇ ಅಲರ್ಟ್ ಆಗಿ ನಮ್ಮ ಪಕ್ಷದ ರಾಜ್ಯಾಧ್ಯಕ್ಷರಿಗೆ ಮತ್ತು ಆರ್. ಅಶೋಕ್ ಅವರಿಗೆ ಕರೆ ಮಾಡಿದೆ. ಆದರೆ ಇಬ್ಬರೂ ಸಿಗಲಿಲ್ಲ. ತಕ್ಷಣವೇ ರಾಜ್ಯ ಪ್ರಧಾನ ಕಾರ್ಯದರ್ಶಿಯೊಬ್ಬರಿಗೆ ಕಾಲ್ ಮಾಡಿ ವಿಷಯ ತಿಳಿಸಿದೆ. ಅವರು 'ಸರಿ ನೋಡ್ತೇನೆ' ಎಂದರು. ಆದರೆ ಮರುದಿನವೇ ಅದೇ ಪ್ರೆಸ್ಟೀಜ್ ಅಪಾರ್ಟ್‌ಮೆಂಟ್ ಪಕ್ಕದ ಮತ್ತೊಂದು ಅಪಾರ್ಟ್‌ಮೆಂಟ್‌ನಲ್ಲಿ ಎರಡನೇ ಸಭೆಯೂ ನಡೆಯಿತು! ಆಗಲೂ ನಾನು ಅದೇ ಪ್ರಧಾನ ಕಾರ್ಯದರ್ಶಿಗೆ ಕರೆ ಮಾಡಿ ಎಚ್ಚರಿಸಿದೆ. ಆದರೆ ನಮ್ಮವರು ಯಾವುದೇ ಕ್ರಮ ಕೈಗೊಳ್ಳಲಿಲ್ಲ ಎಂದು ಹೇಳಿದ್ದಾರೆ.

ವಿಪರ್ಯಾಸ ಎಂದರೆ, ಅಡ್ಡಮತದಾನ ನಡೆದು ಪಕ್ಷಕ್ಕೆ ಭಾರಿ ಮುಖಭಂಗವಾದ ಮೇಲೆ ಅದೇ ಪ್ರಧಾನ ಕಾರ್ಯದರ್ಶಿ ಡಿವಿಎಸ್ ಅವರಿಗೆ ಕರೆ ಮಾಡಿ, "ಅಣ್ಣ ನೀವು ಹೇಳಿದ ಹಾಗೆಯೇ ಆಯ್ತಲ್ಲ!' ಎಂದಿದ್ದರು. ಅದಕ್ಕೆ ಸದಾನಂದ ಗೌಡರು, "ಹೊಳೆ ದಾಟಿದ ಮೇಲೆ ಮತ್ತೇನು ಚರ್ಚೆ?" ಎಂದು ಬೇಸರದಿಂದಲೇ ಸುಮ್ಮನಾದೆ ಎಂದಿದ್ದಾರೆ.

# ಸಾಮೂಹಿಕ ಹತ್ಯೆ ಪ್ರಕರಣದ ಪ್ರಮುಖ ಆರೋಪಿ ತಳವಾರ ಬಂಧನ



■ ಉದಯರಶ್ಮಿ ದಿನಪತ್ರಿಕೆ



## ಭೀಮಾತೀರದಲ್ಲಿ 6 ಜನರ ಹತ್ಯೆ ಪ್ರಕರಣ | ಆರೋಪಿ ಕಾಲಿಗೆ ಗುಂಡು ಹಾರಿಸಿ ಬಂಧಿಸಿದ ಪೊಲೀಸರು | ಚಡಚಣ ಸಿಪಿಐ ಪರಶುರಾಮ ಮನಗೂಳಿ &ಸಿಬ್ಬಂದಿ ಸಾಹಸ

ವಿಜಯಪುರ: ಭೀಮಾತೀರದಲ್ಲಿ ನಡೆದ ಆರು ಜನರ ಸಾಮೂಹಿಕ ಹತ್ಯೆ ಪ್ರಕರಣದ ಪ್ರಮುಖ ಆರೋಪಿ ಮಹೇಶ್ ತಳವಾರನನ್ನು ಬಂಧಿಸುವ ವೇಳೆ ಪೊಲೀಸರು ಕಾಲಿಗೆ ಗುಂಡು ಹಾರಿಸಿ ವಶಕ್ಕೆ ಪಡೆದಿದ್ದಾರೆ.

ತಿಕೋಟಾ ತಾಲೂಕಿನ ಇಟ್ಟಂಗಿಹಾಳ ಗ್ರಾಮದ ಹೊರವಲಯದಲ್ಲಿ ಆರೋಪಿ ಮಹೇಶ್ ತಳವಾರನನ್ನು ಬಂಧಿಸಲು ಚಡಚಣ ಪೊಲೀಸರು ತೆರಳಿದ್ದ ವೇಳೆ ಆತ ಪೊಲೀಸರ ಮೇಲೆ ಕಲ್ಲು ತೂರಿ ದಾಳಿ ನಡೆಸಿ ಪರಾರಿಯಾಗಲು ಯತ್ನಿಸಿದ್ದಾನೆ. ಈ ಸಂದರ್ಭದಲ್ಲಿ ಆತ್ಮರಕ್ಷಣೆ ಹಾಗೂ ಬಂಧನದ ಉದ್ದೇಶದಿಂದ ಚಡಚಣ ಸಿಪಿಐ ಪರಶುರಾಮ ಮನಗೂಳಿ ಅವರು ಮಹೇಶ್‌ನ ಬಲಗಾಲಿಗೆ ಗುಂಡು ಹಾರಿಸಿದ್ದು, ಬಳಿಕ ಆರೋಪಿಯನ್ನು ವಶಕ್ಕೆ ಪಡೆಯಲಾಗಿದೆ.

ಘಟನೆಯಲ್ಲಿ ಪೊಲೀಸ್ ಸಿಬ್ಬಂದಿಗಳಾದ ಶೇಖರ್ ಪವಾರ್ ಹಾಗೂ ವಿಜಯಕುಮಾರ್ ಬನಸೋಡೆ ಗಾಯಗೊಂಡಿದ್ದು, ಇಬ್ಬರನ್ನೂ ಜಿಲ್ಲಾ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ. ಗಾಯಗೊಂಡ ಆರೋಪಿ ಮಹೇಶ್ ತಳವಾರನಿಗೂ ಜಿಲ್ಲಾ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ.

ಕಳೆದ ಮೇ 29ರಂದು ಚಡಚಣ ತಾಲೂಕಿನ ಗೋವಿಂದಪುರ ಗ್ರಾಮದ ಸಮೀಪದ ಜಮೀನಿನಲ್ಲಿ ನಿರಾಳೆ ಕುಟುಂಬದ ಐವರು ಸೇರಿದಂತೆ ಒಟ್ಟು ಆರು ಜನರನ್ನು ಬರ್ಬರವಾಗಿ ಹತ್ಯೆ ಮಾಡಲಾಗಿತ್ತು. ಈ ಪ್ರಕರಣ ರಾಜ್ಯಾದ್ಯಂತ ಭಾರೀ ಸಂಚಲನ ಸೃಷ್ಟಿಸಿತ್ತು.

ಪ್ರಾಥಮಿಕ ತನಿಖೆಯ ಪ್ರಕಾರ, ಹತ್ಯೆ ನಡೆಸಲು ಸುಮಾರು ರೂ. 15 ಲಕ್ಷ ಸುಪಾರಿ ಪಡೆದಿದ್ದ ಮಹೇಶ್ ತಳವಾರ ತನ್ನ ಸಹಚರರನ್ನು ಸೇರಿಸಿಕೊಂಡು ಕೃತ್ಯ ಎಸಗಿದ್ದಾನೆ ಎನ್ನಲಾಗಿದೆ. ಘಟನೆ ಬಳಿಕ ಸುಮಾರು 23 ದಿನಗಳಿಂದ ಪೊಲೀಸರಿಗೆ ಚಳ್ಳೆಹಣ್ಣು ತಿನ್ನಿಸುತ್ತಿದ್ದ ಆರೋಪಿ ಕೊನೆಗೂ ಪೊಲೀಸ್ ಬಲೆಗೆ ಬಿದ್ದಿದ್ದಾನೆ.

ಘಟನಾ ಸ್ಥಳಕ್ಕೆ ಜಿಲ್ಲಾ ಪೊಲೀಸ್ ವ–ರಿಷ್ಠಾಧಿಕಾರಿ (ಎಸ್‌ಪಿ) ಲಕ್ಷ್ಮಣ ನಿಂಬರಗಿ ಹಾಗೂ ಹಿರಿಯ ಪೊಲೀಸ್ ಅಧಿಕಾರಿಗಳು ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಪ್ರಕರಣದ ಕುರಿತು ಹೆಚ್ಚಿನ ತನಿಖೆ ಮುಂದುವ–ರಿದಿದೆ.

# ಬಿಜೆಪಿ ಅಭ್ಯರ್ಥಿ ಗೆಲುವಿಗೆ ಪ್ರಾಮಾಣಿಕ ಪ್ರಯತ್ನ : ವೆಂಕಟೇಶ್



■ ಉದಯರಶ್ಮಿ ದಿನಪತ್ರಿಕೆ

ಎಚ್ ಡಿ ಕೋಟೆ :ಬೂತ್ ಮಟ್ಟದಿಂದ ಪಕ್ಷವನ್ನು ಬಲಪಡಿಸಿ, ಮುಂಬರುವ ಸ್ಥಳೀಯ ಚುನಾವಣೆ ಹಾಗೂ 2028 ವಿಧಾನಸಭೆ ಚುನಾವಣೆಯಲ್ಲಿ ಬಿಜೆಪಿ ಅಭ್ಯರ್ಥಿಗಳ ಗೆಲುವಿಗೆ ಪ್ರಾಮಾಣಿಕವಾಗಿ ಪ್ರಯತ್ನ ಮಾಡುತ್ತೇನೆ ಎಂದು ನೂತನ ಬಿಜೆಪಿ ಮಂಡಲ ತಾಲೂಕು ಅಧ್ಯಕ್ಷ ಟಿ ವೆಂಕಟೇಶ್ ತಿಳಿಸಿದರು.

ಪಟ್ಟಣದ ಬಿಜೆಪಿ ಕಚೇರಿಯಲ್ಲಿ ನಡೆದ ಸರಳ ಸಮಾರಂಭದಲ್ಲಿ ಶಂಭೆಗೌಡ–ರಿಂದ ಅಧಿಕಾರ ಸ್ವೀಕರಿಸಿ ಮಾತನಾಡಿದರು. ತಾಲ್ಲೂಕಿನಲ್ಲಿ ಭಾರತೀಯ ಜನತಾ ಪಕ್ಷವನ್ನು ಮತ್ತಷ್ಟು ಸದೃಢಗೊಳಿಸುವ ಉದ್ದೇಶದಿಂದ ಪಕ್ಷ ನನಗೆ ಅಧ್ಯಕ್ಷರ ಹುದ್ದೆ ನೀಡಿದೆ.ಪಕ್ಷದ ಪ್ರತಿಯೊಬ್ಬ ಕಾರ್ಯಕರ್ತರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಸಂಘಟನಾ ಕಾರ್ಯ ಮಾಡುತ್ತೇನೆ. ಕಾರ್ಯಕರ್ತರ ಸಮಸ್ಯೆಗಳಿಗೆ ಸ್ಪಂದಿಸಿ, ಗ್ರಾಮ ಮಟ್ಟದಿಂದಲೇ ಪಕ್ಷದ ಸಂಘಟನೆಯನ್ನು ಬಲಪಡಿಸುವ ಕೆಲಸಕ್ಕೆ ಆದ್ಯತೆ ನೀಡಲಾಗುವುದು. ಹಿರಿಯ ಮುಖಂಡರ ಮಾರ್ಗದರ್ಶನದೊಂದಿಗೆ ಪಕ್ಷವನ್ನು ಇನ್ನಷ್ಟು ಬಲಿಷ್ಠಗೊಳಿಸಲು ಪ್ರಯತ್ನಿಸಲಾಗುವುದು.

ಕಳೆದ ವಿಧಾನಸಭಾ ಚುನಾವಣೆಯಲ್ಲಿ ಬಿಜೆಪಿ ಪಕ್ಷ ತಾಲ್ಲೂಕಿನಲ್ಲಿ ದ್ವಿತೀಯ ಸ್ಥಾನ ಪಡೆದಿತ್ತು. ಮುಂಬರುವ ವಿಧಾನಸಭೆ ಚುನಾವಣೆಯಲ್ಲಿ ಬಿಜೆಪಿ ಪಕ್ಷದ ಅಭ್ಯರ್ಥಿಯನ್ನು ವಿಧಾನಸೌಧಕ್ಕೆ ಕಳುಹಿಸುವ ನಿಟ್ಟಿನಲ್ಲಿ ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ ಎಂದು ಹೇಳಿದರು.

ಜಿಲ್ಲಾ ಘಟಕದ ಪ್ರಧಾನ ಕಾರ್ಯದರ್ಶಿ ಪರೀಕ್ಷಿತರಾಜೇ ಅರಸ್ ಮಾತನಾಡಿ, ಬಿಜೆಪಿ ಪಕ್ಷವು ಜಿಲ್ಲೆ ಹಾಗೂ ತಾಲ್ಲೂಕಿನಲ್ಲಿ ನಿರಂತರವಾಗಿ ತನ್ನ ಮತಬಲವನ್ನು ಹೆಚ್ಚಿಸಿಕೊಳ್ಳುತ್ತಾ ಬಂದಿದೆ. ಇಂತಹ ಸಂದರ್ಭದಲ್ಲಿ ಪಕ್ಷವನ್ನು ಮತ್ತಷ್ಟು ಸಂಘಟಿತವಾಗಿ ಮುನ್ನಡೆಸುವ ಸಾಮರ್ಥ್ಯ ಹೊಂದಿರುವ ಟಿ. ವೆಂಕಟೇಶ್ ಅವರನ್ನು ಮಂಡಲ ಅಧ್ಯಕ್ಷರಾಗಿ ಆಯ್ಕೆ ಮಾಡಲಾಗಿದೆ.

ಪಕ್ಷದ ಸಿದ್ಧಾಂತದಂತೆ ಪ್ರತಿಯೊಬ್ಬ ಕಾರ್ಯಕರ್ತನಿಗೂ ಗೌರವ ದೊರೆಯಬೇಕು. ಎಲ್ಲಾ ಕಾರ್ಯಕರ್ತರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಪಕ್ಷ ಸಂಘಟನೆ ಮಾಡಿದಾಗ ಮಾತ್ರ ಆಡಳಿತದ ಗುರಿ ಸಾಧಿಸಲು ಸಾಧ್ಯವಾಗುತ್ತದೆ. 2028ರ ವಿಧಾನಸಭಾ ಚುನಾವಣೆಯಲ್ಲಿ ಕ್ಷೇತ್ರದಿಂದ ಬಿಜೆಪಿ ಅಭ್ಯರ್ಥಿಯನ್ನು ಗೆಲ್ಲಿಸಿ ಶಾಸಕರನ್ನಾಗಿ ಕಳುಹಿಸುವ ಸಂಕಲ್ಪ ಹೊಂದಿದ್ದು, ಕಾರ್ಯಕರ್ತರ ಸಹಕಾರದಿಂದ ಅದು ಸಾಧ್ಯವಾಗಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಉಪಾಧ್ಯಕ್ಷ ಎಚ್ ಸಿ ಲಕ್ಷ್ಮಣ್, ಮನುಗನಹಳ್ಳಿ ಮಂಜುನಾಥ್, ಮೊತ್ತ ಬಸವರಾಜಪ್ಪ, ಸರಗೂರು ಅಧ್ಯಕ್ಷ ಸಿ ಕೆ ಗಿರೀಶ್,

ಪ್ರಧಾನ ಕಾರ್ಯದರ್ಶಿ ಗುರುಸ್ವಾಮಿ, ಬಿಡಗಲು ರಾಜು, ನಿಕಟ ಪೂರ್ವ ಅಧ್ಯಕ್ಷ ಶಂಭೇಗೌಡ,

ವೈ.ಟಿ ಮಹೇಶ್, ಪಿ.ಎಲ್ ಡಿ ಬ್ಯಾಂಕ್ ಮಾಜಿ ಅಧ್ಯಕ್ಷ ಮಲ್ಲಿಕಾರ್ಜುನ್, ಚಂದ್ರಮೌಳಿ, ಮಹಾಶಕ್ತಿ ಕೇಂದ್ರದ ಅಧ್ಯಕ್ಷರುಗಳಾದ ಮಂಜುನಾಥ್, ವಿವೇಕಾನಂದ, ಪರಮೇಶ್ವರ್, ಗೋಪಾಲಯ್ಯ,

ಕೆ.ಲೋಕೇಶ್, ಮೋರ್ಚಾ ಅಧ್ಯಕ್ಷರುಗಳಾದ ಪೃಥ್ವಿ ಕುಮಾರ್, ಪುಟ್ಟಸ್ವಾಮಿ, ಬಾಲರಾಜು, ಬಸವರಾಜಚಾರಿ, ಹೊಸಹಳ್ಳಿ, ಕುಮಾರ್, ಭೀಮನಹಳ್ಳಿ ಸೋಮೇಶ್, ವೃಷಭೇಂದ್ರ, ಚಂದ್ರು, ರಾಜೇಂದ್ರ, ಮಂಜುಳಾ, ರಾಮಚಂದ್ರಣ್ಣ, ಸಿದ್ದಯ್ಯ, ಸಿಂಗಯ್ಯ, ಮಗ್ಗೆ ಪ್ರಕಾಶ್, ಜವರಯ್ಯ, ಬಸವರಾಜು, ಸೋಮಚಾರಿ, ನಾಗರಾಜ್, ರಾಮು, ರಾಜಣ್ಣ, ಶ್ರೀರಾಮುಲು ಸೇರಿದಂತೆ ಪಕ್ಷದ ಮುಖಂಡರು, ಕಾರ್ಯಕರ್ತರು ಇದ್ದರು.

# ಸಾರ್ವಜನಿಕ ರಸ್ತೆ ಒತ್ತುವರಿ ತೆರವುಗೊಳಿಸುವಂತೆ ಒತ್ತಾಯಿಸಿ ಮನವಿ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ವಿಜಯಪುರ ಜಂಟಿಯಾಗಿ ವಿಜಯಪುರ ತಾಲೂಕ ಅಂಕಲಗಿ ಗ್ರಾಮದ ದೇವರ ಹಿಪ್ಪರಗಿ ಸರಕಾರಿ ಸಾರ್ವಜನಿಕ ರಸ್ತೆ ಒತ್ತುವರಿ ತೆರವುಗೊಳಿಸುವಂತೆ ಒತ್ತಾಯಿಸಿ ಜಿಲ್ಲಾಧಿಕಾರಿ ಆನಂದ ಕೆ. ಅವರಿಗೆ ಹಾಗೂ ವಿಜಯಪುರ ತಾಲೂಕಾ ದಂಡಾಧಿಕಾರಿಗಳಿಗೆ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ರೈತ ಸಂಘದ ತಾಲೂಕಾಧ್ಯಕ್ಷರಾದ ಮಹಾದೇವಪ್ಪ ಎಸ್. ತೇಲಿ ಮಾತನಾಡಿ, ಅಂಕಲಗಿಯಿಂದ ದೇವರ ಹಿಪ್ಪರಗಿ ಸರಕಾರಿ ಸಾರ್ವಜನಿಕ ರಸ್ತೆ, ಈ ರಸ್ತೆಯು ಗ್ರಾಮ ನಕಾಶೆಯಲ್ಲಿ ನೊಂದಣಿ ಇರುತ್ತದೆ. ಈ ರಸ್ತೆ ಮೇಲೆ ಶಾಲೆ ವಾಹನ ಮತ್ತು ಶಾಲೆ ಮಕ್ಕಳು ಪ್ರತಿನಿತ್ಯ ಶಾಲೆಗೆ ಹೋಗುತ್ತಿದ್ದು ಮತ್ತು ರೈತರು ಕೃಷಿ ಚಟುವಟಿಕೆಗಳಿಗೆ ಹೋಗಿ ಬರುತ್ತಿದ್ದು ಪ್ರತಿ ಸೋಮವಾರ ದೇವರ ಹಿಪ್ಪರಗಿ ಜಾನುವಾರು ಸಂತೆಗೆ ಸುತ್ತಮುತ್ತಲಿನ ಗ್ರಾಮಸ್ಥರು ಹಾದು ಹೋಗುತ್ತಿದ್ದು ಈಗ ಈ ರಸ್ತೆ ಸಂಪೂರ್ಣ ಒತ್ತುವರಿಯಾಗಿರುತ್ತದೆ. ರಸ್ತೆ ಸಂಪೂರ್ಣ ಬಂದಾಗಿರುತ್ತದೆ. ಶಾಲೆ ಮಕ್ಕಳಿಗೆ ರೈತರಿಗೆ, ಸಾರ್ವಜನಿಕರಿಗೆ ಬಹಳ ತೊಂದರೆಯಾಗುತ್ತಿದ್ದೆ. ಕೂಡಲೇ ರಸ್ತೆಯ ಸಮಸ್ಯೆಯನ್ನು ಖುದ್ದಾಗಿ ಬಂದು ಪರಿಶೀಲಿಸಿ ರಸ್ತೆಯು ಸಂಪೂರ್ಣ ಚಾಲತಿ ಮಾಡಿಕೊಡಬೇಕು. ರಸ್ತೆ ಮರು ನಿರ್ಮಾಣ ಮಾಡಿಕೊಡಬೇಕು. ಗರ್ಭಿಣಿ ಸ್ತ್ರೀಯರಿಗೆ, ಹಿರಿಯರಿಗೆ ಎಲ್ಲ ಗ್ರಾಮಸ್ಥರಿಗೆ ಬಹಳ ತೊಂದರೆಯಾಗುತ್ತಿದ್ದು ಕೂಡಲೇ ರಸ್ತೆ ಒತ್ತುವರಿ ಸಮಸ್ಯೆಯನ್ನು ಪರಿಹರಿಸಬೇಕು ಎಂದರು.

ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಯುವ ಘಟಕ ವಿಜಯಪುರ ಜಿಲ್ಲಾಧ್ಯಕ್ಷ ರಾಜೇಸಾಬ ನಧಾಪ ಮಾತನಾಡಿ, ಕೃಷಿ ಚಟುವಟಿಕೆಗಳ ಸಾಮಗ್ರಿಗಳನ್ನು ತರಲು, ಒಯ್ಯಲು ಬಹಳಷ್ಟು ತೊಂದರೆಯಿದೆ ಕೂಡಲೇ ಸಮಸ್ಯೆಯನ್ನು ಪರಿಹರಿಸಬೇಕು. ಶೀಘ್ರದಲ್ಲಿ ಪರಿಹರಿಸದಿದ್ದರೆ ಶಾಲೆಯ ಮಕ್ಕಳು, ಊರಿನ ಗ್ರಾಮಸ್ಥರು ರೈತರು ಒಗ್ಗೂಡಿ ಹೋರಾಟ ಮಾಡಲಾಗುವುದು ಎಂದು ಎಚ್ಚರಿಸಿದರು.

ಈ ಸಂದರ್ಭದಲ್ಲಿ ಮಾಜಿ ಎಪಿಎಂಸಿ ಅಧ್ಯಕ್ಷರಾದ ಕಲ್ಲಪ್ಪ ಸಿ. ಇಂಡಿ, ಮುತ್ತಪ್ಪ ಇಂಡಿ, ಬಸವರಾಜ ಮೋಪಗಾರ, ಮಹಾದೇವಪ್ಪ ಪೂಜಾರಿ, ಲಕ್ಷಪ್ಪ ಇಂಡಿ, ಹಿರಗಪ್ಪ ಉಡಚಣ, ಅಮೋಘೆಪ್ಪ ಪೂಜಾರಿ, ಸಾತಪ್ಪ ಇಂಡಿ, ಚಂದ್ರಯ್ಯ ಹಿರೇಮಠ, ಯಲ್ಲಪ್ಪ ಇಂಡಿ, ಸಂತೋಷ ದಂಡಿನ, ಹುಸೇನಿ ಮುಲ್ಲಾ, ಸಿದ್ದಪ್ಪ ಉಡ–'ಚಣ, ದುಸಂಗಿ ಇಂಡಿ, ಪಂಡಿತ ಹೊಸಮನಿ, ರಮೇಶ ಇಂಡಿ ಸೇರಿದಂತೆ ಮುಂತಾದವರು ಉಪಸ್ಥಿತರಿದ್ದರು.

# ಶುದ್ಧ ಕುಡಿವ ನೀರು ಪೂರೈಕೆಯಲ್ಲಿ ಯಾವುದೇ ಲೋಪವಾಗದಿರಲಿ

## ಸಿಂದಗಿ ಮತ್ತು ಆಲಮೇಲ ತಾಲೂಕುಗಳ ಕುಡಿಯುವ ನೀರಿನ ಪ್ರಗತಿ ಪರಿಶೀಲನಾ ಸಭೆಯಲ್ಲಿ ರಿಷಿ ಆನಂದ ಅಧಿಕಾರಿಗಳಿಗೆ ಸೂಚನೆ

■ ಉದಯರಶ್ಮಿ ದಿನಪತ್ರಿಕೆ




ವಿಜಯಪುರ: ಗ್ರಾಮೀಣ ಪ್ರದೇಶಗಳ ಸಾರ್ವಜನಿಕ–ರಿಗೆ ಯಾವುದೇ ತೊಂದರೆಯಾಗದಂತೆ ಶುದ್ಧ ಕುಡಿಯುವ ನೀರಿನ ನಿರಂತರ ಪೂರೈಕೆಗೆ ಅಗತ್ಯ ಮುಂಜಾಗ್ರತೆ ವಹಿಸಬೇಕು. ಎಂದು ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಿಷಿ ಆನಂದ ಅವರು ಅಧಿಕಾರಿಗಳಿಗೆ ಸೂಚಿಸಿದರು.

ಸಿಂದಗಿ ತಾಲೂಕು ಪಂಚಾಯತಿ ಸಭಾಂಗಣದಲ್ಲಿ ಸೋಮವಾರ ಸಿಂದಗಿ ಮತ್ತು ಆಲಮೇಲ ತಾಲೂಕುಗಳ ಎಲ್ಲಾ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳೊಂದಿಗೆ ನಡೆದ ಕುಡಿಯುವ ನೀರಿನ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸಭೆಯಲ್ಲಿ ಸಿಂದಗಿ ಹಾಗೂ ಆಲಮೇಲ ತಾಲೂಕಿನ ಎಲ್ಲಾ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿರುವ ಕುಡಿಯುವ ನೀರಿನ ಜಲಮೂಲಗಳು, ನೀರಿನ ಲಭ್ಯತೆ ಹಾಗೂ ಪ್ರಸ್ತುತ ಸ್ಥಿತಿ–ಗತಿ ಕುರಿತು ಪಂಚಾಯಿತಿ ಅಭಿವೃದ್ಧಿ ಅಧಿಕಾ–ರಿಗಳಿಂದ ಮಾಹಿತಿ ಪಡೆದ ಅವರು, ನೀರು ಪ್ರತಿಯೊಂದು ಜೀವಿಗೂ ಮೂಲಭೂತ ಅವಶ್ಯಕತೆಯಾಗಿದ್ದು, ಗ್ರಾಮೀಣ ಭಾಗದ ಜನರಿಗೆ ಶುದ್ಧ ಕುಡಿಯುವ ನೀರು ಪೂರೈಕೆಯಲ್ಲಿ ಯಾವುದೇ ರೀತಿಯ ವ್ಯತ್ಯಯ ಉಂಟಾಗದಂತೆ ಕ್ರಮ ವಹಿಸುವಂತೆ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಅಧಿಕಾರಿಗಳು ಹಾಗೂ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಎಲ್ಲಾ ಗ್ರಾಮ ಪಂಚಾಯಿತಿ ವ್ಯಾಪ್ತಿಯ ನೀರಿನ ಮೂಲಗಳ ಎಫ್‌ಟಿಕೆ ಪರೀಕ್ಷೆಯನ್ನು ಬಾಕಿ ಉಳಿದಿರುವ ಕಡೆಗಳಲ್ಲಿ ಎರಡು ದಿನಗಳೊಳಗಾಗಿ ಪೂರ್ಣಗೊಳಿಸಬೇಕು ಎಂದು ಸೂಚಿಸಿದ ಅವರು, ಯಾವುದೇ ಗ್ರಾಮಗಳಲ್ಲಿ ಕಲುಷಿತ ನೀರು ಪೂರೈಕೆಯಾಗದಂತೆ ಎಚ್ಚ–ರಿಕೆ ವಹಿಸಬೇಕು. ಕಲುಷಿತ ನೀರು ಪೂರೈಕೆಯಂತಹ ಪ್ರಕರಣಗಳು ಕಂಡುಬಂದಲ್ಲಿ ಸಂಬಂಧಿಸಿದ ಅಧಿಕಾ–ರಿಗಳನ್ನೇ ನೇರ ಹೊಣೆಗಾರರನ್ನಾಗಿ ಮಾಡಿ ಶಿಸ್ತು ಕ್ರಮ ಕೈಗೊಳ್ಳಲಾಗುವುದು ಎಂದು ಪುನರುಚ್ಚರಿಸಿದರು.

ಜಲ ಜೀವನ ಮಿಷನ್ಗೆ ಸಂಬಂಧಿಸಿದಂತೆ ಫಲಾನುಭವಿಗಳ ಆಧಾರ್ ಕಾರ್ಡ್ ಅಪ್ಲೋಡ್ ಪ್ರಕ್ರಿಯೆ ಬಾಕಿ ಉಳಿದಿದ್ದು, ಅದನ್ನು ತ್ವರಿತವಾಗಿ ಪೂರ್ಣಗೊಳಿಸಬೇಕು. ಮುಂದಿನ 10 ದಿನಗಳೊಳಗಾಗಿ ಹರ್ ಘರ್ ಜಲ್ ಡಿಕ್ಲೇರೇಷನ್ ಅಭಿಯಾನವನ್ನು ಪರಿಣಾಮಕಾರಿಯಾಗಿ ಕೈಗೊಳ್ಳುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ತೆರಿಗೆ ವಸೂಲಾತಿ ಅಭಿಯಾನವನ್ನು ತ್ವರಿತವಾಗಿ ಹಮ್ಮಿಕೊಂಡು ಹೆಚ್ಚಿನ ಪ್ರಗತಿ ಸಾಧಿಸುವಂತೆ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ಸೂಚನೆ ನೀಡಿದರು. ಸಭೆಯಲ್ಲಿ ಸಿಂದಗಿ ಮತ್ತು ಆಲಮೇಲ ತಾಲೂಕು ಪಂಚಾಯಿತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳಾದ ರಾಮು ಜಿ. ಅಗ್ನಿ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರಾದ ತಾರಾನಾಥ ರಾಠೋಡ, ತಾಲೂಕು ಪಂಚಾಯತಿಯ ಸಹಾಯಕ ನಿರ್ದೇಶಕರು ಶೋಭಾ ಮುದಗಲ್, ಇಲಾಖೆಯ ಕಿರಿಯ ಅಭಿಯಂತರರಾದ ಎಚ್.ಎಂ. ಸಾರವಾಡ, ಎ.ಎ. ದುರ್ಗದ, ಸಿಂದಗಿ ಮತ್ತು ಆಲಮೇಲ ತಾಲೂಕಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಹಾಗೂ ತಾಲೂಕು ಪಂಚಾಯಿತಿ ಅಧಿಕಾರಿ, ಸಿಬ್ಬಂದಿ ಉಪಸ್ಥಿತರಿದ್ದರು.

# ಸಾಂಸ್ಕೃತಿಕ ಸೌರಭ ಕಾರ್ಯಕ್ರಮ :ಅರ್ಜಿ ಆಹ್ವಾನ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಮೂಲಕ ಚಿಗುರು, ಯುವಸೌರಭ ಹಾಗೂ ಸಾಂಸ್ಕೃತಿಕ ಸೌರಭ ಕಾರ್ಯಕ್ರಮ ಆಯೋಜನೆ ಮಾಡುತ್ತಿರುವ ಉದ್ದೇಶದಿಂದ ಇಲಾಖೆಯ ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ಭಾಗವಹಿಸಲು ಇಚ್ಛಿಸುವ ಆಸಕ್ತ ಕಲಾವಿದರಿಂದ ಅರ್ಜಿ ಆಹ್ವಾನಿಸಲಾಗಿದೆ. ಚಿಗುರು, ಯುವ ಸೌರಭ ಹಾಗೂ ಸಾಂಸ್ಕೃತಿಕ ಸೌರಭ ಕಾರ್ಯಕ್ರಮಗಳಲ್ಲಿ ಭಾಗವಹಿಸಲು ಇಚ್ಛಿಸುವ ಕಲಾವಿದರು ಅರ್ಜಿ ಸಲ್ಲಿಸಬಹುದು. ಚಿಗುರು ಕಾರ್ಯಕ್ರಮದಲ್ಲಿ ಭಾಗವಹಿಸಲು ಇಚ್ಛಿಸುವವರು 8 ರಿಂದ 14 ವಯೋಮಾನದವರು,ಯುವಸೌರಭ ಕಾರ್ಯಕ್ರಮದಲ್ಲಿ ಭಾಗವಹಿಸುವವರು 15 ರಿಂದ 30 ವರ್ಷದ ಪ್ರತಿಭಾವಂತ ಯುವ ಕಲಾವಿದರಾಗಿರಬೇಕು.

ಆಕಾಶವಾಣಿ ವಿವಿಧ ಗ್ರೇಡಗಳ ಕಲಾವಿದರನ್ನು ಹಾಗೂ ಸರ್ಕಾರದಿಂದ ಕೊಡಮಾಡುವ ಪ್ರಶಸ್ತಿ ಪುರಸ್ಕೃತ ಕಲಾವಿದರನ್ನು ಸಾಂಸ್ಕೃತಿಕ ಸೌರಭ ಕಾರ್ಯಕ್ರಮಕ್ಕೆ ಪರಿಗಣಿಸಲಾಗುತ್ತದೆ.

ಈ ಕಾರ್ಯಕ್ರಮಗಳಲ್ಲಿ ಭಾಗವಹಿಸಲಿಚ್ಛಿಸುವ ಕಲಾವಿದರು ಅಗತ್ಯ ದಾಖಲೆ ಸಹಿತ ಅರ್ಜಿಯನ್ನು ಜುಲೈ 01 ರೊಳಗಾಗಿ ಸಹಾಯಕ ನಿರ್ದೇಶಕರ ಕಚೇರಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕಂದಗಲ್ ಶ್ರೀ ಹನುಮಂತರಾಯ ರಂಗಮಂದಿರ,ಸ್ಟೇಶನ್ ರಸ್ತೆ ಇಲ್ಲಿಗೆ ಖುದ್ದಾಗಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 08352251261 ಸಂಪರ್ಕಿಸಬಹುದೆಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಸಂತೋಷ ಭೋವಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜು.1 ರಿಂದ ಹಿರಿಯ ನಾಗರಿಕರ ಗುರುತಿನ ಚೀಟಿ ಅಭಿಯಾನ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ವಿಶ್ವ ಹಿರಿಯ ನಾಗರಿಕರ ದಿನಾಚರಣೆಯ ಅಂಗವಾಗಿ ಜುಲೈ 1 ರಿಂದ 31ರವರೆಗೆ ಹಿರಿಯ ನಾಗರಿಕರ ಗುರುತಿನ ಚೀಟಿ ವಿಶೇಷ ಅಭಿಯಾನ ಹಮ್ಮಿಕೊಳ್ಳಲಾಗಿದೆ.

ಅಭಿಯಾನದಡಿ ಜಿಲ್ಲೆಯ ಅರ್ಹ ಹಿರಿಯ ನಾಗರಿಕರನ್ನು ಗುರುತಿಸಿ, ಸೇವಾಸಿಂಧು ಪೋರ್ಟಲ್ ಮೂಲಕ ಹಿರಿಯ ನಾಗರಿಕರ ಗುರುತಿನ ಚೀಟಿಗಾಗಿ ಆನ್ ಲೈನ್ ಅರ್ಜಿ ಸಲ್ಲಿಸಿ, ಗುರುತಿನ ಚೀಟಿಗಳನ್ನು ವ್ಯವಸ್ಥಿತವಾಗಿ ಹಾಗೂ ಪರಿಣಾಮಕಾರಿಯಾಗಿ ಹಮ್ಮಿಕೊಳ್ಳಲಾಗುತ್ತಿದೆ. ವಿತರಿಸಲಾಗುವುದು. ಈ ಅವಧಿಯಲ್ಲಿ ಎಲ್ಲಾ ಹಿರಿಯ ನಾಗರಿಕರ ಹೊಸದಾಗಿ ಅರ್ಜಿ ಸಲ್ಲಿಸಲು, ಅಗತ್ಯ ದಾಖಲೆಗಳ ಪರಿಶೀಲನೆಗೆ ಹಾಗೂ ಸಂಬಂಧಿತ ಸೇವೆಗಳನ್ನು ಸುಲಭವಾಗು ಪಡೆಯಲು ಅವಕಾಶ ಕಲ್ಪಿಸಲಾಗಿದೆ.

ಹಿರಿಯ ನಾಗರಿಕರು ಸರ್ಕಾರದ ವಿವಿಧ ಸೌಲಭ್ಯಗಳನ್ನು ಸುಲಭವಾಗಿ ಪಡೆಯಲು ಗುರುತಿನ ಚೀಟಿ ಅತ್ಯಗತ್ಯವಾಗಿದ್ದು, ಇನ್ನೂ ಗುರುತಿನ ಚೀಟಿ ಪಡೆಯದ ಎಲ್ಲಾ ಅರ್ಹ ಹಿರಿಯ ನಾಗರಿಕರು ಈ ವಿಶೇಷ ಅಭಿಯಾನದ ಪ್ರಯೋಜನ ಪಡೆದುಕೊಳ್ಳುವಂತೆ ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನೀಟ್ ಪರೀಕ್ಷೆ: ನಿಷೇಧಾಜ್ಞೆ ಜಾರಿಗೊಳಿಸಿ ಆದೇಶ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಜೂನ್ 21ರಂದು ನೀಟ್ ಪರೀಕ್ಷೆಯು ವಿಜಯಪುರ ನಗರದ ಒಟ್ಟು 19 ಪರೀಕ್ಷಾ ಕೇಂದ್ರಗಳಲ್ಲಿ ನಡೆಯಲಿದ್ದು, ಪರೀಕ್ಷಾ ಕೇಂದ್ರಗಳ ಸುತ್ತಲಿನ 200 ಮೀ.ಪ್ರದೇಶವನ್ನು ನಿಷೇಧಿತ ಪ್ರದೇಶವೆಂದು ಘೋಷಿಸಿ ಜಿಲ್ಲಾ ದಂಡಾಧಿಕಾರಿಗಳಾದ ಜಿಲ್ಲಾಧಿಕಾರಿ ಡಾ.ಆನಂದ. ಕೆ ಅವರು ಆದೇಶ ಹೊರಡಿಸಿದ್ದಾರೆ.

ಪರೀಕ್ಷಾ ಕೇಂದ್ರಗಳ 200 ಮೀ ವ್ಯಾಪ್ತಿಯಯಲ್ಲಿನ ಪರೀಕ್ಷಾ ಕೇಂದ್ರದ ಸಮೀಪದಲ್ಲಿರುವ ಝರಾಕ್ಸ್ ಅಂಗಡಿಗಳು, ಕಂಪ್ಯೂಟರ್ ಸೆಂಟರ್ ಗಳು, ಇಂಟರನೆಟ್, ಸೈಬರ್ ಕೆಫೆಗಳು ಮತ್ತು ಕೋಚಿಂಗ್ ಕೇಂದ್ರಗಳು ಬೆಳಿಗ್ಗೆ 9:30 ಗಂಟೆಯಿಂದ ಪರೀಕ್ಷೆ ಮುಕ್ತಾಯ ವಾಗುವವರೆಗೆ ತೆರೆಯದಂತೆ ಆದೇಶಿಸಲಾಗಿದೆ. ಪರೀಕ್ಷೆಯಲ್ಲಿ ತೊಡಗಿರುವ ಯಾವುದೇ ಅಧಿಕಾರಿ ಹಾಗೂ ಸಿಬ್ಬಂದಿಗಳು ಮತ್ತು ಇತರರರು ಮೊಬೈಲ್ ತರುವುದನ್ನು ಹಾಗೂ ಬಳಸುವುದನ್ನು ನಿಷೇಧಿಸಲಾಗಿದೆ ಎಂದು ಜಿಲ್ಲಾಧಿಕಾರಿಗಳು ಆದೇಶದಲ್ಲಿ ತಿಳಿಸಿದ್ದಾರೆ.

# 'ಭಾರತ ಭೂಷಣ' ಪ್ರಶಸ್ತಿಗೆ ಪತ್ರಕರ್ತ ಕುಬಕಡ್ಡಿ ಆಯ್ಕೆ

■ ಉದಯರಶ್ಮಿ ದಿನಪತ್ರಿಕೆ




ಕೊಲ್ಹಾರ: ಇಲ್ಲಿನ ಸಂಗಮೇಶ್ವರ ಹಿರಿಯ ಪ್ರಾಥಮಿಕ ಶಾಲೆಯ ದೈಹಿಕ ಶಿಕ್ಷಕ ಹಾಗೂ ಪತ್ರಕರ್ತ ಮಲ್ಲಿಕಾರ್ಜುನ ಕುಬಕಡ್ಡಿ ಅವರು ಶಿಕ್ಷಣ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಮಾಡಿದ ಸಾಧನೆಯನ್ನು ಗುರುತಿಸಿ, ಅಂತರರಾಷ್ಟ್ರೀಯ ಹಿಂದೂ ಮಹಾಸಭಾ ಕರ್ನಾಟಕ ವತಿಯಿಂದ ನೀಡಲಾಗುವ 2026ನೇ ಸಾಲಿನ 'ಭಾರತ ಭೂಷಣ' ರಾಷ್ಟ್ರೀಯ ಪ್ರಶಸ್ತಿಗೆ ಆಯ್ಕೆಯಾಗಿದ್ದಾರೆ ಎಂದು ಕರ್ನಾಟಕ ವಿದ್ಯಾರ್ಥಿ ಪರಿಷತ್ ರಾಜ್ಯಾಧ್ಯಕ್ಷ ಸಾಗರ ಕಲಾದಗಿ ತಿಳಿಸಿದ್ದಾರೆ.

ಜೂನ್ 24ರಂದು ಬಾಗಲಕೋಟೆಯ ಲಯನ್ಸ್ ಕ್ಲಬ್ ಸಭಾಭವನದಲ್ಲಿ ಅಂತರಾಷ್ಟ್ರೀಯ ಹಿಂದೂ ಮಹಾಸಭಾ ಕರ್ನಾಟಕ ಹಾಗೂ ವಿಜಯಪುರ ಜಿಲ್ಲಾ ವಿದ್ಯಾರ್ಥಿ ಪರಿಷತ್ ಸಂಯುಕ್ತವಾಗಿ ಆಯೋಜಿಸಿರುವ 'ಸಂಸ್ಕೃತ ಸಿರಿ ಉತ್ಸವ' ಮತ್ತು ರಾಷ್ಟ್ರ ಪ್ರಶಸ್ತಿ ಪ್ರಧಾನ ಸಮಾರಂಭದಲ್ಲಿ ಈ ಪ್ರಶಸ್ತಿ ಪ್ರದಾನವಾಗಲಿದೆ.

# ದ್ವಿಚಕ್ರ ವಾಹನ ಚಲಾಯಿಸುತ್ತಿದ್ದ ಅಪ್ರಾಪ್ತ ಬಾಲಕ :25,000 ದಂಡ

■ ಉದಯರಶ್ಮಿ ದಿನಪತ್ರಿಕೆ



ಕೊಲ್ಹಾರ: ರಾಷ್ಟ್ರೀಯ ಹೆದ್ದಾರಿ 52ರ ಗಾಣದೇವಿ ಸರ್ಕಲ್‌ನಲ್ಲಿ ಪಿಎಸ್ಐ ಅಶೋಕ ನಾಯಕ ವಾಹನ ತಪಾಸಣೆ ವೇಳೆ ಅಪ್ರಾಪ್ತ ಬಾಲಕನೊಬ್ಬ ದ್ವಿಚಕ್ರ ವಾಹನ ಚಲಾಯಿಸುತ್ತಿರುವುದು ಪತ್ತೆಯಾಯಿತು. ಬಬಲೇಶ್ವರ ತಾಲೂಕಿನ ಕಾರಜೋಳ ಗ್ರಾಮದ ನಿವಾಸಿ ಬಾಲಕನ ತಂದೆ ಅಲ್ಲಾಭಕ್ಷ ಗುಡುಸಾಬ್ ಮುಳವಾಡ ವಿರುದ್ಧ ಮೋಟಾರು ವಾಹನ ಕಾಯ್ದೆ ಕಲಂ 199(ಎ) ಅಡಿಯಲ್ಲಿ ಪ್ರಕರಣ ದಾಖಲಿಸಿ, ಬಸವನ ಬಾಗೇವಾಡಿ ನ್ಯಾಯಾಲಯವು 25,000 ದಂಡ ವಿಧಿಸಿ, ವಾಹನದ ನೋಂದಣಿಯನ್ನು 6 ತಿಂಗಳು ಅಮಾನತು ಮಾಡಲು ಆದೇಶಿಸಿದೆ.

ಈ ಕುರಿತು ಮಾತನಾಡಿದ ಕೊಲ್ಹಾರ ಪೊಲೀಸ್ ಠಾಣೆಯ ಪಿಎಸ್ಐ ಅಶೋಕ ನಾಯಕ ಅಪ್ರಾಪ್ತ ವಯಸ್ಸಿನ ಮಕ್ಕಳಿಗೆ ವಾಹನ ಚಾಲನೆ ಮಾಡಲು ಅವಕಾಶ ನೀಡುವುದು ಕಾನೂನು ಬಾಹಿರವಾಗಿದ್ದು, ಪೋಷಕರು ಸಂಚಾರ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು ಎಂದು ಮನವಿ ಮಾಡಿದ್ದಾರೆ.

ಅಪ್ರಾಪ್ತ ಮಕ್ಕಳಿಗೆ ವಾಹನ ನೀಡುವುದರಿಂದ ಅಪಘಾತಗಳ ಸಂಭವ ಹೆಚ್ಚಾಗುತ್ತಿದ್ದು, ಅವರ ಜೀವಕ್ಕೆ ಹಾಗೂ ಇತರರ ಸುರಕ್ಷತೆಗೆ ಅಪಾಯ ಉಂಟಾಗುತ್ತದೆ ಎಂದು ಹೇಳಿದರು. ನಿಯಮ ಉಲ್ಲಂಘನೆ ಮಾಡಿದ ಪೋಷಕರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಸಿದರು. ಸಾರ್ವಜನಿಕರು ರಸ್ತೆ ಸುರಕ್ಷತೆಗೆ ಹೆಚ್ಚಿನ ಆದ್ಯತೆ ನೀಡಬೇಕು ಹಾಗೂ ಕಾನೂನು ನಿಯಮಗಳನ್ನು ಪಾಲಿಸುವ ಮೂಲಕ ಸುರಕ್ಷಿತ ಸಂಚಾರಕ್ಕೆ ಸಹಕರಿಸಬೇಕು ಎಂದು ಅವರು ಮನವಿ ಮಾಡಿದ್ದಾರೆ.

# ಉತ್ತಮ ಆರೋಗ್ಯಕ್ಕೆ ಯೋಗವೇ ಮಾರ್ಗ :ಶ್ರೀಶೈಲಗೌಡ

■ ಉದಯರಶ್ಮಿ ದಿನಪತ್ರಿಕೆ



ಸಿಂದಗಿ: ನಗರದ ಕೃಷಿ ಉತ್ಪನ್ನ ಮಾರುಕಟ್ಟೆ ಆವರಣದಲ್ಲಿ ಂಕಒಅ ಯೋಗಾ ಗ್ರೂಪ್ ನವರಿಂದ ಅಂತರರಾಷ್ಟ್ರೀಯ ಯೋಗ ದಿನಾಚರಣೆ ಆರೋಜಿಸಲಾಗಿತ್ತು.

ಈ ವೇಳೆ ಬಿಜೆಪಿ ಮುಖಂಡ ಶ್ರೀಶೈಲಗೌಡ ಬಿರಾದಾರ ಮಾತನಾಡಿ, ಹೆಮ್ಮೆಯ ಪ್ರಧಾನಮಂತ್ರಿ ನರೇಂದ್ರ ಮೋದಿಯವರ ಅವಿರತ ಶ್ರಮದಿಂದಾಗಿ ಇಂದು ಭಾರತದ ಈ ಪ್ರಾಚೀನ ಕಲೆ ಜಗತ್ತಿನಾದ್ಯಂತ ಪಸರಿಸಿದೆ. ಇಂದು ಇಡೀ ವಿಶ್ವವೇ ಭಾರತದ ಕಡೆ ಮುಖ ಮಾಡಿ ಯೋಗವನ್ನು ಅಪ್ಪಿಕೊಳ್ಳುತ್ತಿದೆ ಎಂದರೆ ಅದಕ್ಕೆ ನಮ್ಮ ಸಂಸ್ಕೃತಿಯಲ್ಲಿರುವ ಶಕ್ತಿಯೇ ಕಾರಣ. ನಮ್ಮ ಯುವ ಪೀಳಿಗೆ ಮೊಬೈಲ್ ಮತ್ತು ಕೆಟ್ಟ ಹವ್ಯಾಸಗಳಿಗೆ ಬಲಿಯಾಗದೆ, ಯೋಗ ಮತ್ತು ಸದೃಢ ಜೀವನಶೈಲಿಯನ್ನು ಅಳವಡಿಸಿಕೊಳ್ಳಬೇಕು. ಸಿಂದಗಿ ಮತಕ್ಷೇತ್ರದ ಪ್ರತಿಯೊಂದು ಹಳ್ಳಿಯಲ್ಲೂ ಇಂತಹ ಯೋಗ ಶಿಬಿರಗಳು ನಡೆಯಬೇಕು ಎನ್ನುವುದು ನನ್ನ ಆಸೆ ಎಂದರು.

ರುದ್ರಯ್ಯಸ್ವಾಮಿ ಹಿರೇಮಠ ಸ್ವಾಗತಿಸಿದರು. ಶಿಕ್ಷಕ ಸಂಗಮೇಶ ಕಕ್ಕಸಗೇರಿ ವಂದಿಸಿದರು.

ಗಣ್ಯರಾದ ಅಶೋಕ ವಾರದ, ಡಾ.ಗಿರೀಶ ಕುಲಕರ್ಣಿ, ಡಾ.ರವಿ ಗೋಲಾ, ಡಾ.ಚಿದಾನಂಜ ಅಳಗುಂಡಗಿ, ಶರಣಯ್ಯ ಹಿರೇಮಠ, ಮಹಾಂತೇಶ ಪಟ್ಟಣಶೆಟ್ಟಿ, ಬೋಜಪ್ಪ ಸಂಗಮ, ಸಿದ್ಧರಾಮ ಪಾಟೀಲ ಸೇರಿದಂತೆ ಅನೇಕರಿದ್ದರು.

# ಬೆಳೆ ವಿಮೆಗೆ ಅರ್ಜಿ ಸಲ್ಲಿಸಿ: ಕೃಷಿ ಅಧಿಕಾರಿ ಸಾಣಿ

■ ಉದಯರಶ್ಮಿ ದಿನಪತ್ರಿಕೆ



ಸಿಂದಗಿ: ಪ್ರಸಕ್ತ ಮುಂಗಾರು ಹಂಗಾಮಿನಲ್ಲಿ ವಿವಿಧ ಬೆಳೆಗಳ ವಿಮೆಗಾಗಿ ಅರ್ಜಿ ಸಲ್ಲಿಸಲು ಕೃಷಿ ಸಹಾಯಕ ನಿರ್ದೇಶಕ ಪ್ರಶಾಂತ ಸಾಣಿ ತಿಳಸಿದ್ದಾರೆ.

ಈ ಯೋಜನೆಯ ಸೌಲಭ್ಯ ಪಡೆಯಲು ರೈತರು ಉದ್ದ ಮತ್ತು ಹೆಸರಿನ ಬೆಳೆಗಳಿಗೆ ಜುಲೈ 15, ಸೂರ್ಯಕಾಂತಿ, ಮುಸುಕಿನ ಜೋಳ, ಸಜ್ಜೆ, ತೊಗರಿ, ಶೇಂಗಾ ಬೆಳೆಗಳಿಗೆ ಜುಲೈ 31 ಮತ್ತು ನೀರಾವರಿ ಸೂರ್ಯಕಾಂತಿ ಬೆಳೆಗೆ ಆಗಸ್ಟ್ 14 ಕೊನೆಯ ದಿನವಾಗಿರುತ್ತದೆ. ಆಸಕ್ತ ರೈತರು ನಿಗದಿತ ಅವಧಿಯೊಳಗೆ ಅರ್ಜಿಗಳನ್ನು ಸಲ್ಲಿಸಬೇಕು ಎಂದು ಕೃಷಿ ಇಲಾಖೆ ಸಹಾಯಕ ನಿರ್ದೇಶಕ ಪ್ರಶಾಂತ ಸಾಣಿ ಮನವಿ ಮಾಡಿದ್ದಾರೆ.

## ವಿದ್ಯುತ್ ಖಾಸಗೀಕರಣ ವಿರೋಧಿಸಿ ಹಸಿರು ಸೇನೆ ಮನವಿ

# ಸರ್ಕಾರ ತಕ್ಷಣವೇ ವಿದ್ಯುತ್ ಖಾಸಗೀಕರಣ ಕೈಬಿಡಲು ಆಗ್ರಹ

■ ಉದಯರಶ್ಮಿ ದಿನಪತ್ರಿಕೆ



ಬಬಲೇಶ್ವರ: ರಾಜ್ಯದ ಸಮಸ್ತ ರೈತರ ಪರವಾಗಿ, ಗ್ರಾಹಕರ ಪರವಾಗಿ, ನೌಕರರ ಹಿತದೃಷ್ಟಿ ಹಾಗೂ ಸಾರ್ವಜನಿಕರ ಹಿತದೃಷ್ಟಿಯಿಂದ ಹೆಸ್ಕಾಂ ವಿದ್ಯುತ್ ಸಂಸ್ಥೆಯನ್ನು ಟಾಟಾ ಕಂಪನಿ ಲಿಮಿಟೆಡ್‌ಗೆ ಹಸ್ತಾಂತರ ಮಾಡುತ್ತಿರುವುದನ್ನು ಮತ್ತು ವಿದ್ಯುತ್ ವಿತರಣಾ ಪರವಾನಿಗೆಯನ್ನು ನೀಡುತ್ತಿರುವುದನ್ನು ಕೂಡಲೇ ಕೈಬಿಟ್ಟು ಸರಕಾರವೇ ನಡೆಸಿಕೊಂಡು ಹೋಗಬೇಕು ಎಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ವತಿಯಿಂದ ತಹಶಿಲ್ದಾರರು ಹಾಗೂ ಹೆಸ್ಕಾಂ ಸಹಾಯಕ ಕಾರ್ಯ ನಿರ್ವಾಹಕ ಅಭಿಯಂತರರ ಮೂಲಕ ರಾಜ್ಯ ಸರ್ಕಾರಕ್ಕೆ ಮನವಿ ಸಲ್ಲಿಸಿ ಆಗ್ರಹ ಮಾಡಲಾಯಿತು.

ಹಸಿರು ಸೇನೆಯ ಜಿಲ್ಲಾಧ್ಯಕ್ಷ ಸಂಗಮೇಶ ಸಗರ ಮಾತನಾಡಿ, ಹೆಸ್ಕಾಂ ಇಲಾಖೆಯನ್ನು ಟಾಟಾ ಪವರ್ ಕಂಪನಿ ಲಿಮಿಟೆಡ್ ಸೇರಿದಂತೆ ಇತರೆ ಖಾಸಗಿ ಸಂಸ್ಥೆಗಳಿಗೆ ರಾಜ್ಯದ 15 ಜಿಲ್ಲೆಗಳಲ್ಲಿ ವಿದ್ಯುತ್ ವಿತರಣಾ ಪರವಾನಿಗೆ ನೀಡಲು ನಿರ್ಧರಿಸಿರುವುದನ್ನು ಈ ಕೂಡಲೇ ಕೈಬಿಡಬೇಕು, ಈಗಾಗಲೇ ರಾಜ್ಯದ 31 ಜಿಲ್ಲೆಗಳ ಎಲ್ಲಾ ತಾಲೂಕು ಹಾಗೂ ಜಿಲ್ಲಾ ಕೇಂದ್ರಗಳಲ್ಲಿ ಸಾವಿರಾರು ರೈತರು ವಿರೋಧವನ್ನು ವ್ಯಕ್ತಪಡಿಸಿ ಮನವಿ ಸಲ್ಲಿಸಲಾಗುತ್ತಿದೆ, ಒಂದು ವೇಳೆ ರಾಜ್ಯ ಸರ್ಕಾರ ಮೊಂಡು ತನ ತೋರಿಸಿ ವಿದ್ಯುತ್ ಇಲಾಖೆಯನ್ನು ಕಾಸಗೀಕರಣ ಮಾಡಿಯೇ ತೀರುತ್ತೇನೆ ಎಂದು ಹಟ ಹಿಡಿದರೆ , ರಾಜ್ಯದ ಎಲ್ಲಾ ರಾಷ್ಟ್ರೀಯ ಹಾಗೂ ರಾಜ್ಯ ಹೆದ್ದಾರಿಗಳನ್ನು ತಡೆದು ಬೇರೆ ಬೇರೆ ರೀತಿ ಹೋರಾಟ ಮಾಡಲಾಗುವುದು ಎಂದು ಎಚ್ಚರಿಸಿದರು.

ಬಬಲೇಶ್ವರ ತಾಲೂಕಾ ಅಧ್ಯಕ್ಷರಾದ ಸುರೇಶ ಕಿರಸೂರ, ಹಿರಿಯ ರೈತ ಮುಖಂಡರಾದ ಸುರೇಶ ಶಿರಬೂರ ಹಾಗೂ ಬಸಂತ ಕಾಂಬಳೆ, ಪುಟ್ಟು ಗಡದನ್ನವರ, ರಾಜು ನದಾಫ, ಮಹಾದೇವ ಬನಸೋಡೆ, ರಾಮನಗೌಡ ಪಾಟೀಲ, ಸಂಗೀತಾ ರಾಟೋಡ, ಯುವ ರೈತ ಮುಖಂಡರಾದ ಸಿದ್ದರಾಯ ಚೌಧರಿ ಮಾತನಾಡಿ, ಈ ಪರವಾನಿಗೆ ಪ್ರಕ್ರಿಯೆಯನ್ನು ಕೂಡಲೇ ಕೈಬಿಡಬೇಕು, ಇಲ್ಲವಾದಲ್ಲಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ವತಿಯಿಂದ ರಾಜ್ಯದ 31 ಜಿಲ್ಲೆಗಳಲ್ಲಿ ಉಗ್ರವಾದ ಹೋರಾಟ ಮಾಡಲಾಗುವುದು ಎಂದು ಎಚ್ಚರಿಸಿದರು.

ವಿವೇಕ ದೇವರು, ಗುಣದಾಳ ಸಾನಿಧ್ಯವಹಿಸಿ ಆರ್ಶಿವಚನ ನೀಡಿದರು.

ಈ ವೇಳೆ ಸುರೇಶ ಕಿರಸೂರ, ಮುಕುಬುಲ್ ಕೀಜಿ, ಶ್ರೀಶೈಲ ಬೊಮ್ಮಾರ, ಪುಟ್ಟು ಗಡದನ್ನವರ, ಮಲ್ಲು ಬೂದಿಹಾಳ, ಸೂರ್ಯಕಾಂತ, ಸಂಗಮೇಶ, ಪರಮಾನಂದ, ವಿಠ್ಠಲ ಪೂಜಾರಿ, ಲೋಹಿತ ದಳವಾಯಿ, ಸಂಜು ಬಾಡಗಂಡಿ, ಬಸವರಾಜ ರೆಡ್ಡಿ, ಮಳೆಪ್ಪ, ಸಿಂಧೂರ, ಸೂರ್ಯಕಾಂತ, ಗಿರಿಯಪ್ಪ, ಕರೆಪ್ಪ, ಅಶೋಕ, ಗಂಗಯ್ಯ , ಲಕ್ಷ್ಮೀ ಬಿರಾದಾರ ಸೇರಿದಂತೆ ಅನೇಕರು ಇದ್ದರು.

# ಖಾಸಗಿ ಸಂಸ್ಥೆಗಳಿಗೆ ವಿದ್ಯುತ್ ವಿತರಣೆ ಲೈಸನ್ಸ್ ನೀಡದಿರಲು ಮನವಿ

■ ಉದಯರಶ್ಮಿ ದಿನಪತ್ರಿಕೆ



ದೇವರಹಿಪ್ಪರಗಿ: ವಿದ್ಯುತ್ ಇಲಾಖೆಯನ್ನು ಟಾಟಾ ಪವರ್ ಕಂಪನಿ ಲಿಮಿಟೆಡ್ ಸೇರಿದಂತೆ ಇತರೆ ಖಾಸಗಿ ಸಂಸ್ಥೆಗಳಿಗೆ ವಿದ್ಯುತ್ ವಿತರಣಾ ಪರವಾನಗಿ ನೀಡ ಕೂಡದು ಎಂದು ಆಗ್ರಹಿಸಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ಪದಾಧಿಕಾರಿಗಳು ಪ್ರತಿಭಟನೆ ಕೈಗೊಂಡು ತಹಶೀಲ್ದಾರ ನಿಂಗಣ್ಣ ಬಿರಾದಾರ ಅವರಿಗೆ ಮನವಿ ಸಲ್ಲಿಸಿದರು.

ಪಟ್ಟಣದ ಟಿಪ್ಪು ಸುಲ್ತಾನ ವೃತ್ತದಲ್ಲಿ ಸಭೆ ಸೇರಿದ ರೈತ ಸಮುದಾಯ ವಿದ್ಯುತ್ ವಿತರಣಾ ಕೇಂದ್ರಗಳನ್ನು ಖಾಸಗೀಕರಣ ಮಾಡುವುದರ ವಿರುದ್ಧ ಘೋಷಣೆ ಕೂಗುತ್ತಾ ಮೆರವಣಿಗೆ ಹೊರಟು ಮೊಹರೆ ಹಣಮಂತ್ರಾಯ ವೃತ್ತ, ಡಾ.ಅಂಬೇಡ್ಕರ್ ವೃತ್ತದ ಮೂಲಕ ಇಂಡಿ ರಸ್ತೆಯಲ್ಲಿನ ತಹಶೀಲ್ದಾರ ಕಚೇರಿ ತಲುಪಿ ಮನವಿ ಸಲ್ಲಿಸಿದರು.

ನಂತರ ಹೆಸ್ಕಾಂ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ಸತೀಶ ಸುಲಾಖೆ ಅವರಿಗೂ ಸಹ ಮನವಿ ಸಲ್ಲಿಸಿದರು. ಈ ಸಂದರ್ಭದಲ್ಲಿ ರೈತ ಪ್ರಮುಖರಾದ ಸಿದ್ಧನಗೌಡ ಪಾಟೀಲ, ಸೋಮಶೇಖರ ಹಿರೇಮಠ, ರಾಮು ದೇಸಾಯಿ ಮಾತನಾಡಿದರು. ರೈತ ಪ್ರಮುಖರಾದ ಅಜೀಜ್ ಯಲಗಾರ, ಶಾಂತಪ್ಪ ದೇವೂರ, ಸಂಪತ ಜಮಾದಾರ, ರಾವುತ ಅಗಸರ, ಗುರು ಜಡಗೊಂಡ, ಕಾಶೀನಾಥ ಕೋರಿ, ಮುನೀರ್ ಅಹ್ಮದ್ ಮಳಖೇಡ, ಹಣಮಂತ್ರಾಯ ಪೋಲಿಸ್‌ಪಾಟೀಲ(ದೇವೂರ), ದಿನೇಶ ಪಾಟೀಲ, ರಮೇಶ ಈಳಗೇರ, ಸಿ.ಎಸ್.ಪ್ಯಾಟಿ, ಅಶೋಕ ನಾಯ್ಕೋಡಿ, ನ್ನಮ್ಮ ಮೇತ್ರಿ ಹಲವಾರು ರೈತರು ಭಾಗವಹಿಸಿದ್ದರು.

# ಯೋಗದಿಂದ ಆರೋಗ್ಯ ವೃದ್ಧಿ, ಮಾನಸಿಕ ಶಾಂತಿ :ರಜಪೂತ್

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಜೂನ್ 21 ರಂದು ಜಗತ್ತಿನಾದ್ಯಂತ ಆಚರಿಸಲಾಗುವ ಅಂತಾರಾಷ್ಟ್ರೀಯ ಯೋಗ ದಿನದ ಅಂಗವಾಗಿ, ನಗರದ ಪ್ರಸಿದ್ಧ ಫಿಟ್‌ನೆಸ್ ಸಂಸ್ಥೆಯಾದ 'ಅಲೆಕ್ಸ್ ಫಿಟ್‌ನೆಸ್' (ಂಟಜಥ ಈಣಟಿಛ) ವತಿಯಿಂದ ವಿಶೇಷ ಯೋಗ ಶಿಬಿರ ಮತ್ತು ಜಾಗೃತಿ ಕಾರ್ಯಕ್ರಮವನ್ನು ಯಶಸ್ವಿಯಾಗಿ ಆಯೋಜಿಸಲಾಗಿತ್ತು.

ಕಾರ್ಯಕ್ರಮದ ನೇತೃತ್ವವನ್ನು ವಹಿಸಿದ್ದ ಅಲೆಕ್ಸ್ ಫಿಟ್‌ನೆಸ್‌ನ ಯೋಗ ತರಬೇತುದಾರ ಮಾಸ್ಟರ್ ಸಂಪತ್‌ಸಿಂಗ್ ರಜಪೂತ್ ಅವರು ನೆರೆದಿದ್ದ ಸಾರ್ವಜನಿಕರಿಗೆ ಮತ್ತು ಫಿಟ್‌ನೆಸ್ ಪ್ರೇಮಿಗಳಿಗೆ ವಿವಿಧ ಯೋಗಾಸನ, ಪ್ರಾಣಾಯಾಮ ಹಾಗೂ ಧ್ಯಾನದ ಪ್ರಾಮುಖ್ಯತೆಯನ್ನು ಪ್ರಾಯೋಗಿಕವಾಗಿ ಮನವರಿಕೆ ಮಾಡಿಕೊಟ್ಟರು.

ಈ ಸಂದರ್ಭದಲ್ಲಿ ಮಾತನಾಡಿದ ಮಾಸ್ಟರ್ ಸಂಪತ್‌ಸಿಂಗ್ ರಜಪೂತ್ ಅವರು, "ಯೋಗವು ಕೇವಲ ದೈಹಿಕ ವ್ಯಾಯಾಮವಲ್ಲ, ಅದು ದೇಹ ಮತ್ತು ಮನಸ್ಸನ್ನು ಸಮತೋಲನದಲ್ಲಿಡುವ ಒಂದು ಜೀವನ ಪದ್ಧತಿ. ಇಂದಿನ ಒತ್ತಡದ ಜೀವನದಲ್ಲಿ ಪ್ರತಿಯೊಬ್ಬರೂ ಪ್ರತಿದಿನ ಯೋಗಾಭ್ಯಾಸ ಮಾಡುವುದರಿಂದ ಉತ್ತಮ ಆರೋಗ್ಯ ಹಾಗೂ ಮಾನಸಿಕ ಶಾಂತಿ ಪಡೆಯಬಹುದು," ಎಂದು ಕರೆ ನೀಡಿದರು.ಯೋಗ ದಿನಾಚರಣೆ ಕಾರ್ಯಕ್ರಮದಲ್ಲಿ ನೂರಾರು ಯೋಗಾಸಕ್ತರು ಪಾಲ್ಗೊಂಡು ಉತ್ಸಾಹದಿಂದ ಯೋಗಾಸನಗಳನ್ನು ಪ್ರದರ್ಶಿಸಿದರು. ಕಾರ್ಯಕ್ರಮದ ಕೊನೆಯಲ್ಲಿ ಆರೋಗ್ಯಕರ ಜೀವನಶೈಲಿಯನ್ನು ಅಳವಡಿಸಿಕೊಳ್ಳುವ ಬಗ್ಗೆ ಎಲ್ಲರಿಗೂ ಸಂಕಲ್ಪ ಬೋಧಿಸಲಾಯಿತು.

# ಪ್ರತಿದಿನ ಯೋಗ ಮಾಡಿದರೆ ರೋಗ ದೂರ :ನಾರಾಯಣ ಶಾಸ್ತ್ರಿ

■ ಉದಯರಶ್ಮಿ ದಿನಪತ್ರಿಕೆ




ಜಮಖಂಡಿ: ಭಾರತ ಜಗತ್ತಿಗೆ ನೀಡಿದ ಮಹೋನ್ನತ ಕೊಡುಗೆಗಳಲ್ಲಿ ಯೋಗವು ಒಂದಾಗಿದ್ದು ಪ್ರತಿ ದಿನ ಯೋಗ ಮಾಡಿದರೆ ರೋಗವು ದೂರವಾಗುತ್ತದೆ ಎಂದು ಮುಖ್ಯ ಶಿಕ್ಷಕ ನಾರಾಯಣ ಶಾಸ್ತ್ರಿ ಹೇಳಿದರು.

ಅವರು ಪಿ.ಎಂ.ಶ್ರೀ. ಕರ್ನಾಟಕ ಪಬ್ಲಿಕ್ ಶಾಲೆ ಕುಂಬಾರಹಳ್ಳದಲ್ಲಿ ಸಂಪನ್ನಗೊಂಡ ಹನ್ನೆರಡನೆಯ ವಿಶ್ವ ಯೋಗ ದಿನದ ಅಧ್ಯಕ್ಷತೆ ವಹಿಸಿ ಮಾತನಾಡಿ ಇಂದು ಜಗತ್ತಿನಾದ್ಯಂತ ಜನರು ಯೋಗದತ್ತ ಮುಖ ಮಾಡಿದ್ದಾರೆ ಮಕ್ಕಳು ಸಹ ಯೋಗವನ್ನು ಅಳವಡಿಸಿಕೊಂಡು ಉನ್ನತ ಸಾಧನೆಯನ್ನು ಮಾಡಿರಿ. ಪತಂಜಲಿಯ ಯಮ, ನಿಯಮ, ಆಸನ, ಪ್ರಾಣಾಯಾಮ, ಪ್ರತ್ಯಾಹಾರ, ಧ್ಯಾನ, ಧಾರಣ, ಸಮಾಧಿ ಎಂಬೀ ಅಷ್ಟಾಂಗ ಮಾರ್ಗವು ಆರೋಗ್ಯದ ತಳಹದಿಯಾಗಿದೆ ಎಂದರು.

ಶಿಕ್ಷಕ ಸಂಗನಬಸವ ಉಟಗಿ ಮಾತನಾಡಿ, ಇಂದಿನ ಒತ್ತಡದ ಜೀವನದಲ್ಲಿ ಯೋಗ ಬಹಳ ಮುಖ್ಯವಾಗಿದೆ. ಮಕ್ಕಳಲ್ಲಿ ನೆನಪಿನ ಶಕ್ತಿ ಹೆಚ್ಚಿಸುವಲ್ಲಿ ಯೋಗ ಮಹತ್ವದ ಪಾತ್ರ ವಹಿಸುತ್ತದೆ. ಪ್ರತಿ ದಿನವೂ ತಪ್ಪದೇ ಯೋಗವನ್ನು ಮಾಡಬೇಕು ಎಂದು ಹೇಳಿದರು.

ದೈಹಿಕ ಶಿಕ್ಷಣ ಶಿಕ್ಷಕ ಬಾಹುಬಲಿ ಮುತ್ತೂರ ಮಕ್ಕಳಿಗೆ ಎಲ್ಲಾ ಆಸನಗಳನ್ನು ಹೇಳಿಕೊಟ್ಟು ಪೂರಕ ವಿವರಣೆ ನೀಡಿದರು. ಯೋಗದಿಂದ ದೇಹ ಮತ್ತು ಮನಸ್ಸುಗಳ ಸಮನ್ವಯ ಸಾಧ್ಯವಾಗುತ್ತದೆ. ವಸುದೈವ ಕುಟುಂಬಕಂ ಎಂಬ ಘೋಷವಾಕ್ಯವು ಯೋಗದಿಂದ ಮಾತ್ರ ಸಾಧ್ಯ ಎಂದು ಹೇಳಿ ಮಕ್ಕಳಿಗೆ ಪ್ರಾತ್ಯಕ್ಷಿಕೆಯ ಮೂಲಕ ಯೋಗವನ್ನು ಹೇಳಿಕೊಟ್ಟರು.

ಶಿಕ್ಷಕರಾದ ಅಶೋಕ ಬಿರಾದಾರ ಪಾಟೀಲ ಮಕ್ಕಳಿಗೆ ಶುಭ ಹಾರೈಸಿದರು. ಶಿಕ್ಷಕಿ ಶಾರದಾ ಮಠ ಸ್ವಾಗತಿಸಿದರು. ಚಿತ್ರಕಲಾ ಶಿಕ್ಷಕ ಚಂದ್ರಕಾಂತ ಪೋಲೀಸ ವಂದಿಸಿದರು. ಎಸ್.ಡಿ.ಎಮ್.ಸಿ. ಸದಸ್ಯ ಹನುಮಂತ ಮರನೂರ, ಶ್ರೀಮತಿ ಮಂಜುಳಾ ಕಡಕೋಳ, ಶಕುಂತಲಾ ಬಿರಾದಾರ, ಊರಿನ ಹಿರಿಯರು ಉಪಸ್ಥಿತರಿದ್ದರು. ನೂರಾರು ಮಕ್ಕಳು ಸೃಷ್ಠಿಯ ಮಡಿಲಲ್ಲಿ ಯೋಗಿಗಳಾಗಿ ಕಣ್ಮನ ಸೆಳೆದರು.

### ಬಾದಾಮಿಯಲ್ಲಿ ನಡೆದ ಶಿಕ್ಷಕ ಕೃಷ್ಣಪ್ಪ ಪೂಜಾರಿ ಅವರ ಸೇವಾ ನಿವೃತ್ತಿ ಪ್ರಯುಕ್ತ ನಡೆದ ಅಭಿನಂದನಾ ಸಮಾರಂಭ

# ಜೀವಪರ ನಿಲುವಿನ ಸಹೃದಯಿ ಶಿಕ್ಷಕ ಕೃಷ್ಣಾ ಪೂಜಾರ :ಇಂದುಶೇಖರ

**ಉದಯರಶ್ಮಿ ದಿನಪತ್ರಿಕೆ**

ಬದಾಮಿ: ಜೀವಪರ ನಿಲುವಿನ ಸಹೃದಯಿ ಶಿಕ್ಷಕ ಕೃಷ್ಣಾ ಪೂಜಾರ ಅವರದು ಬಹುಮುಖ ವ್ಯಕ್ತಿತ್ವ. ತಮ್ಮ ಅನೇಕ ಶಿಷ್ಯರ ಪ್ರತಿಭೆಯನ್ನು ಗುರುತಿಸಿ ಅವರ ಭವಿಷ್ಯ ರೂಪಿಸಲು ಸರ್ವ ಪ್ರಯತ್ನಗಳನ್ನು ಮಾಡಿದ್ದಾರೆ. ಸರ್ವರನ್ನು "ಇವನಾರವ ಎನ್ನದೆ, ಇವ ನಮ್ಮವ" ಎಂಬ ಬಸವಾದಿ ಶರಣರ ನಡೆ ಅವರದಾಗಿದೆ ಎಂದು ಕಾರ್ಯನಿರತ ಪತ್ರಕರ್ತರ ಸಂಘದ ವಿಜಯಪುರ ಜಿಲ್ಲಾ ಘಟಕದ ಪ್ರಧಾನ ಕಾರ್ಯದರ್ಶಿ ಹಾಗೂ 'ಉದಯರಶ್ಮಿ' ದಿನಪತ್ರಿಕೆಯ ಸಂಪಾದಕ ಇಂದುಶೇಖರ ಮಣೂರ ಹೇಳಿದರು.


ಪಟ್ಟಣದ ಗಣೇಶ ದೇವಸ್ಥಾನದ ಸಭಾಭವನದಲ್ಲಿ ಶಿಕ್ಷಕ ಕೃಷ್ಣಪ್ಪ ಪೂಜಾರಿ ಅವರ ಸೇವಾ ನಿವೃತ್ತಿ ಪ್ರಯುಕ್ತ ನಿಮಿತ್ತ ಅವರ ಕುಟುಂಬ ವರ್ಗ ಮತ್ತು ಅಭಿಮಾನಿಗಳು ಏರ್ಪಡಿಸಿದ ಅಭಿನಂದನಾ ಸಮಾರಂಭದಲ್ಲಿ ಅವರು ಮಾತನಾಡಿದರು.

ತಾಲೂಕಿನ ನೀರಲಕೇರಿ ಜಿಎಂಪಿಎಸ್ ಮುಖ್ಯ ಶಿಕ್ಷಕ ಎನ್.ಕೆ.ಚವ್ಹಾಣ, ಶಿಕ್ಷಕ ಬಿ.ಎಚ್.ನದಾಫ ಮಾತನಾಡಿ, ಶಿಕ್ಷಕ ಕೃಷ್ಣಪ್ಪ ಅವರು ಶಾಲೆಯಲ್ಲಿ ನಮ್ಮನ್ನೆಲ್ಲ ವೃತ್ತಿ ಬಾಂಧವರಂತೆ ಕಾಣದೆ ಮನೆ ಮಕ್ಕಳಂತೆ ಕಂಡು ನಮಗೆಲ್ಲ ಮಾರ್ಗದರ್ಶನ ಮಾಡುತ್ತಿದ್ದರು. ಶಾಲೆಯ ಸಾಂಸ್ಕೃತಿಕ ಕಾರ್ಯಕ್ರಮಗಳು ಯಶಸ್ವಿಯಾಗಲು ಅವರ ಪಾತ್ರ ಮುಖ್ಯವಾಗಿತ್ತು. ಮಕ್ಕಳ ಒಲವು ಸಂಪಾದಿಸಿದ ಆದರ್ಶ ಶಿಕ್ಷಕ ಅವರಾಗಿದ್ದರು ಎಂದು ಗುಣಗಾನ ಮಾಡಿದರು.



**ಪುಷ್ಪವೃಷ್ಟಿಗೈಯುತ್ತ ಕರೆತಂದರು**

ಕಾರ್ಯಕ್ರಮಕ್ಕೂ ಮುನ್ನ ಶಿಕ್ಷಕ ಕೃಷ್ಣಪ್ಪ ಪೂಜಾರ ದಂಪತಿಯನ್ನು ಅವರ ಹಿತೈಷಿಗಳು, ಬಂಧು-ಮಿತ್ರರು ಮತ್ತು ಕುಟುಂಬ ವರ್ಗದವರು ದಾರಿಯುದ್ದಕ್ಕೂ ನಿರಂತರ ಪುಷ್ಪವೃಷ್ಟಿಗೈಯುತ್ತ ವೇದಿಕೆಯ ಸ್ಥಳಕ್ಕೆ ಕರೆತರುವ ದೃಶ್ಯ ಎಲ್ಲರ ಮನಸೂರೆಗೊಂಡಿತು.



ಪಟ್ಟಣದ ವಾರ್ಡ್ ನಂ.10 ರ ಪುರಸಭೆ ಸದಸ್ಯ ನಾಗರಾಜ ಕಾಚಟ್ಟಿ ಮಾತನಾಡಿ, ಶಿಕ್ಷಕ ಕೃಷ್ಣಪ್ಪ ಪೂಜಾರ ಅವರು, ಹಿರಿಯರೊಂದಿಗೆ ಹಿರಿಯರಾಗಿ, ಕಿರಿಯರೊಂದಿಗೆ ಕಿರಿಯರಾಗಿ ನಮ್ಮ ಗಾರ್ಡನ್ ಕಾಲೊನಿಯ ಎಲ್ಲ ಉತ್ಸವಗಳಲ್ಲೂ ದಣಿವರಿಯದೆ ಪಾಲ್ಗೊಂಡು ಅವುಗಳ ಯಶಸ್ಸಿಗೆ ಶ್ರಮಿಸುವ ಸಂಘಜೀವಿಯಾಗಿದ್ದಾರೆ ಎಂದು ಬಣ್ಣಿಸಿದರು.

ಶಿಕ್ಷಕ ಕೃಷ್ಣಪ್ಪ ಪೂದಾರ ಸುಪುತ್ರ, ಅಭಿಯಂತರ ಮಂಜುನಾಥ ಮಾತನಾಡಿ, ತಂದೆಯವರು ನನಗೆ ಹಾಗೂ ನನ್ನ ಸಹೋದರಿಯರಿಗೆ ಉತ್ತಮ ಸಂಸ್ಕಾರ ಮತ್ತು ಉನ್ನತ ಶಿಕ್ಷಣ ನೀಡಿರುವ ಕಾರಣದಿಂದಲೇ ನಾವೆಲ್ಲ ಇಂದು ಸಮಾಜದಲ್ಲಿ ಗುರುತಿಸಿಕೊಳ್ಳಲು ಸಾಧ್ಯವಾಗಿದೆ. ಇಂದು ಅವರ ಸಹೋದ್ಯೋಗಿಗಳು, ಮಿತ್ರರು ಹೃದಯತುಂಬಿ ಮಾಡಿದ ತಂದೆಯ ಗುಣಗಾನ ಕೇಳಿ ಅವರ ಬಗೆಗಿನ ಗೌರವ ಇಮ್ಮಡಿಯಾಗಿದೆ. ಅವರ ಪುತ್ರನಾಗಿ ನನ್ನಲ್ಲಿ ಧನ್ಯತಾ ಭಾವ ಮೂಡಿದೆ ಎಂದು ಭಾವುಕರಾಗಿ ನುಡಿದರು.



"ಮಕ್ಕಳಿಗೆ ಇಂದು ಮೌಲ್ಯಾಧಾರಿತ ಶಿಕ್ಷಣದ ಅಗತ್ಯವಿದೆ. ನೀತಿಬೋಧನೆಯಿಲ್ಲದ ಪಾಠ ವ್ಯರ್ಥ. ಪಾಲಕರು ತಮ್ಮ ಮಕ್ಕಳಿಗೆ ಉತ್ತಮ ಸಂಸ್ಕಾರ ನೀಡಿದಾಗ ಮಾತ್ರ ಅವರು ಸಮಾಜದಲ್ಲಿ ಸಭ್ಯ ನಾಗರಿಕರಾಗಿ ಉಜ್ವಲ ಭವಿಷ್ಯ ರೂಪಿಸಿಕೊಳ್ಳಬಲ್ಲರು. ಸಮಾಜದ ಸ್ವಾಸ್ಥ್ಯ ಕಾಪಾಡಬಲ್ಲರು."



**ಕೃಷ್ಣಪ್ಪ ಪೂಜಾರ**
ನಿವೃತ್ತ ಶಿಕ್ಷಕರು, ಬದಾಮಿ

ಇದೇ ವೇಳೆ ಶಿಕ್ಷಕ ಕೃಷ್ಣಪ್ಪ ಪೂಜಾರ, ಧರ್ಮಪತ್ನಿ ಸುನಂದಾ ಪೂಜಾರ ದಂಪತಿಗೆ ಶಿಕ್ಷಕ ಬಂಧುಗಳು, ಪಟ್ಟಣದ ಗಣ್ಯರು ಮತ್ತು ಗಾರ್ಡನ್ ಕಾಲೊನಿ ನಿವಾಸಿಗಳು ಸನ್ಮಾನಿಸಿ ಗೌರವಿಸಿದರು.

ಸನ್ಮಾನಕ್ಕೆ ಪ್ರತಿಯಾಗಿ ಮಾತನಾಡಿದ ಹಿರಿಯ ಶಿಕ್ಷಕ ಕೃಷ್ಣಪ್ಪ ಪೂಜಾರ, ತಮ್ಮೆಲ್ಲರ ಹಾರೈಕೆ, ಗೌರವ ಕಂಡು ನನ್ನ ವೃತ್ತಿಜೀವನದಲ್ಲಿ ಸಾರ್ಥಕತೆ ಭಾವ ಮೂಡಿದೆ. ನನ್ನ ಜವಾಬ್ದಾರಿಯನ್ನು ಮತ್ತಷ್ಟು ಹೆಚ್ಚಿಸಿದೆ. ಶಿಕ್ಷಕನಾಗಿ ನಿವೃತ್ತಿ ಹೊಂದಿರಬಹುದು. ಇದನ್ನು ಮುಕ್ತಾಯವೆಂದು ಭಾವಿಸದೆ ಎರಡನೆ ಇನ್ನಿಂಗ್ಸ್‌ನ ಆರಂಭವೆಂದು ಅರ್ಥೈಸಿಕೊಂಡು ಸಮಾಜಸೇವೆಯಲ್ಲಿ ತೊಡಗಿಕೊಳ್ಳುವುದಾಗಿ ತಿಳಿಸಿದರು. ಹಿರಿಯ ಪತ್ರಕರ್ತ ಇಂದುಶೇಖರ ಮಣೂರ ಸ್ವಾಗತಿಸಿದರು. ಶ್ರೀಮತಿ ಜಯಶ್ರೀ ಜುಮ್ಮನಗೌಡರ ನಿರೂಪಿಸಿದರು. ಮುಖ್ಯ ಗುರು ಝಡ್.ಕೆ.ಹುಸೇನಭಾಯಿ ಪರಿಚಯಿಸಿದರು. ಎಸಿ ಅಧಿಕಾರಿ ಎನ್.ಎಂ.ಕುಂಬಾರ ವಂದಿಸಿದರು.

ಕಾರ್ಯಕ್ರಮದಲ್ಲಿ ಗಾರ್ಡನ್ ಕಾಲೋನಿಯ ಮುಖಂಡರಾದ ರಾಜೂ ಕಾಚಟ್ಟಿ ಪುರಸಭೆ ಸದಸ್ಯರು, ಎಸ್.ಎನ್.ಪರೂತಿ ಅಧ್ಯಕ್ಷರು, ಶಂಕ್ರಣ್ಣ ತೆಗ್ಗಿನಮನಿ, ಆರ್.ಆರ್.ಪಾಟೀಲ, ಬಂದೇನವಾಜ ಕೆಸರಟ್ಟಿ, ಬಿ.ಬಿ.ಶಾಂತಪ್ಪನವರ್, ಸಿ.ಎಸ್.ಕುಂಬಾರ, ಎನ್.ಎಮ್.ಕುಂಬಾರ, ಪಿಎಸ್ಐ ರಾಘವೇಂದ್ರ ಗುರ್ಲ್, ನಿವೃತ್ತ ಯೋಧ ಬಸವರಾಜ ಮೆಣಸಗಿ, ಸಂಜೀವ ಬರಗುಂಡಿ ಸೇರಿದಂತೆ ಅನೇಕ ಶಿಕ್ಷಕರಿದ್ದರು.



## ಯೋಗದಿಂದ ರೋಗ ದೂರ :ಪ್ರೊ.ಖೊದ್ನಾಪೂರ

**ಉದಯರಶ್ಮಿ ದಿನಪತ್ರಿಕೆ**

ವಿಜಯಪುರ: ಯೋಗವು ಕೇವಲ ಒಂದು ದೈಹಿಕ ವ್ಯಾಯಾಮವಲ್ಲ. ಅದು ಮನಸ್ಸು, ದೇಹ ಮತ್ತು ಉಸಿರಾಟಗಳ ನಡುವಿನ ಸಂಪರ್ಕದ ಸಾಧನವಾಗಿದೆ. ವ್ಯಕ್ತಿಯಲ್ಲಿರುವ ಚಿತ್ತದ ವೃತ್ತಿಗಳನ್ನು ನಿಯಂತ್ರಿಸುವುದಾಗಿದೆ. ಇದರಿಂದ ಜೀವನದಲ್ಲಿ ಶಿಸ್ತು, ಚೈತನ್ಯ, ಸಮತೋಲಿತ ಮತ್ತು ಸುಸ್ಥಿರ ಆರೋಗ್ಯಕ್ಕೆ ಸಹಕಾರಿ ಎಂದು ಪ್ರೊ. ಎಂ.ಎಸ್.ಖೊದ್ನಾಪೂರ ಅಭಿಪ್ರಾಯಪಟ್ಟರು.

ಅವರು ನಗರದ ಅಥಣಿ ರಸ್ತೆಯಲ್ಲಿರುವ ಅಲ್-ಅಮೀನ್ ಆಸ್ಪತ್ರೆಯ ಎದುರಿಗೆ ಇರುವ ಎನ್.ಜಿ.ಓ. ಕಾಲನಿಯ ಆಂಜನೇಯ ದೇವಸ್ಥಾನದಲ್ಲಿ ದಿನಾಂಕ: 21-06-2026 ರಂದು ಅಂತರಾಷ್ಟ್ರೀಯ ಯೋಗ ದಿನಾಚರಣೆ ಮತ್ತು 7 ದಿನಗಳ ಯೋಗ ಶಿಬಿರದ ಉದ್ಘಾಟನೆಯಲ್ಲಿ ಅವರು ಮಾತನಾಡುತ್ತಿದ್ದರು. ಭಾರತವು ಭವ್ಯ ಪರಂಪರೆ-ಸಂಸ್ಕೃತಿಯ ತವರೂರು. ಸಾಧು-ಸಂತ, ಋಷಿಮುನಿಗಳ ಭವ್ಯತೆ ನಾಡು. ಅಧ್ಯಾತ್ಮಕತೆಯ ಪುಣ್ಯಭೂಮಿ. ಪ್ರಾಚೀನ ಕಾಲದಲ್ಲಿ ನಮ್ಮ ದೇಶದ ಋಷಿ-ಮುನಿಗಳು, ಸಾಧು-ಸಂತರು ತಮ್ಮ ತಪಸ್ಸು, ಮನಃಶಾಂತಿ, ಭಕ್ತಿ ಮತ್ತು ಧ್ಯಾನದಲ್ಲಿ ಏಕಾಗ್ರತೆಯನ್ನು ತರಲು ಯೋಗ ಅವಶ್ಯಕ. ಯೋಗದ ಮೂಲಕ ಜಾಗತಿಕ ಐಕ್ಯತೆ ಮತ್ತು ಸಂಸ್ಕೃತಿಯ ಪರಿಚಯಿಸಿದ ಮತ್ತು ಇಡೀ ಜಗತ್ತಿಗೆ ಯೋಗದ ಮೂಲಕ ಅಧ್ಯಾತ್ಮಕತೆಯನ್ನು ಸಾರಿದ ನಾಡು ನಮ್ಮದು.. ಯೋಗ-ವ್ಯಾಯಾಮಗಳಂತಹ ನಮ್ಮ ದೇಶೀಯ ಸಂಸ್ಕೃತಿಯನ್ನು ರೂಢಿಸಿಕೊಂಡು ನಮ್ಮ ಮುಂದಿನ ಜನಾಂಗದ ಉತ್ತಮ ಆರೋಗ್ಯಕ್ಕೆ ಯೋಗದ ಮಹತ್ವದ ಬಗ್ಗೆ ಜಾಗೃತಿ ಮೂಡಿಸಿ ತನ್ಮೂಲಕ ಈ ಭವ್ಯ ಭಾರತವನ್ನು ಸ್ವಾಸ್ಥ ಮತ್ತು ಆರೋಗ್ಯಯುತವನ್ನಾಗಿಸಲು ನಾವೆಲ್ಲ ಕಂಕಣಬದ್ಧರಾಗೋಣ ಎಂದು ಸಲಹೆ ನೀಡಿದರು.

ಯೋಗ ಶಿಕ್ಷಕಿ ಮಂಜುಳಾ ಜೋಶಿ ಅವರು ಮಹಿಳೆಯರಿಗೆ ಯೋಗಾಭ್ಯಾಸ ಶಿಬಿರದಲ್ಲಿ ಮಾತನಾಡುತ್ತಾ, ಯೋಗವು ಒತ್ತಡ, ಸಂಘರ್ಷ, ಆತಂಕ, ದುಗುಡ, ಖಿನ್ನತೆ, ನಿರ್ಲಿಪ್ತತೆ ಮತ್ತು ಮಾನಸಿಕ ಅಶಾಂತಿಯನ್ನು ಹೋಗಲಾಡಿಸಿ ಏಕಾಗ್ರತೆಯನ್ನು ಹೆಚ್ಚಿಸಲು ಪ್ರಯೋಜನಕಾರಿಯಾಗಿದೆ. ದೈನಂದಿನವಾಗಿ ಯೋಗಾಭ್ಯಾಸ ಮಾಡುವುದರಿಂದ ಆರೋಗ್ಯಕರ ಜೀವನಶೈಲಿ ಬೆಳೆಸಲು ಇದೊಂದು ಶಕ್ತಿಯುತವಾದ ಸಾಧನವಾಗಿದೆ ಎಂದರು. ಈ ಯೋಗ ಶಿಬಿರದಲ್ಲಿ ಸುತ್ತಮುತ್ತಲಿನ ಕಾಲನಿಗಳ ಮಹಿಳೆಯರು, ಮಕ್ಕಳು ಸೇರಿದಂತೆ 100 ಕ್ಕೂ ಹೆಚ್ಚು ಜನರು ಯೋಗ ಶಿಬಿರದಲ್ಲಿ ಪಾಲ್ಗೊಂಡಿದ್ದರು.

## ತಿಕೋಟಾ: ಏಳು ದಿನಗಳ ಉಚಿತ ಯೋಗ ಶಿಬಿರ ಯಶಸ್ವಿ

**ಉದಯರಶ್ಮಿ ದಿನಪತ್ರಿಕೆ**



ತಿಕೋಟಾ: 12ನೇ ವಿಶ್ವ ಯೋಗ ದಿನಾಚರಣೆಯ ಅಂಗವಾಗಿ ಪತಂಜಲಿ ಯೋಗ ಸಮಿತಿ ವತಿಯಿಂದ ಪಟ್ಟಣದ ಕನಕದಾಸ ಮಂಗಲ ಕಾರ್ಯದಲ್ಲಿ ಏಳು ದಿನಗಳ ಉಚಿತ ಯೋಗ ಶಿಬಿರವನ್ನು ಸಾರ್ವಜನಿಕರಿಗಾಗಿ ಯಶಸ್ವಿಯಾಗಿ ಆಯೋಜಿಸಿದರು. ಶಿಬಿರದ ರವಿವಾರ ಮುಕ್ತಾಯ ಸಮಾರಂಭದಲ್ಲಿ ಆದರ್ಶ ಶಿಕ್ಷಕ ರಾಜ್ಯ ಪ್ರಶಸ್ತಿ ಪುರಸ್ಕೃತ ಡಾ. ಜಿ. ಎಸ್. ಬೂಸಗೊಂಡ ಮಾತನಾಡಿ, ವಯಸ್ಸು ಮತ್ತು ಲಿಂಗ ಭೇದವಿಲ್ಲದೆ ಪ್ರತಿಯೊಬ್ಬರೂ ಯೋಗ ಮಾಡಿದರೆ ರೋಗ ದೂರವಾಗುತ್ತದೆ. ಸದೃಢ ನಾಗರಿಕರಿಂದ ಮಾತ್ರ ಸದೃಢ ದೇಶ ನಿರ್ಮಾಣ ಸಾಧ್ಯ ಎಂದು ಹೇಳಿದರು. ಸಮಾರಂಭದ ಅಧ್ಯಕ್ಷತೆ ವಹಿಸಿದ ವಿರಕ್ತ ಮಠದ ಚನ್ನಮಲ್ಲಿಕಾರ್ಜುನ ಸ್ವಾಮೀಜಿ ಮಾತನಾಡಿ ಸದೃಢ ಶರೀರದಲ್ಲಿ ಮಾತ್ರ ಸದೃಢ ಮನಸ್ಸು ನೆಲೆಸಲು ಸಾಧ್ಯ. ನಮ್ಮ ಆರೋಗ್ಯದ ಜೊತೆಗೆ ಪರಿಸರ ಆರೋಗ್ಯದ ಬಗ್ಗೆಯೂ ಕಾಳಜಿ ವಹಿಸಬೇಕು ಎಂದು ಕರೆ ನೀಡಿದರು. ರಾಷ್ಟ್ರಮಟ್ಟದಲ್ಲಿ ಯೋಗ ಪ್ರದರ್ಶನ ನೀಡಿ ಹೆಸರು ಗಳಿಸಿದ ಪಟ್ಟಣದ ಕುಮಾರಿ ಅನುಷ್ಕಾ ಅಥಣಿ ವೇದಿಕೆಯ ಮೇಲೆ ಯೋಗ ಪ್ರದರ್ಶನ ನೀಡಿ ಆಯೋಜಕರಿಂದ ಗೌರವಿಸಲ್ಪಟ್ಟರು. ಊರಿನ ಮುಖಂಡರಾದ ಲೇಪು ಕಣ್ಣು, ಸದಾಶಿವ ಮಂಗಸೂಳಿ, ಬಸವರಾಜ ದೇವಾನಾಯಕ, ಗೀತಾ ತಾಳಿಕೋಟಿ ಮಾತನಾಡಿದರು. ಸುರೇಶ್ ಪರಮಾಜಿ, ಸುರೇಶ ಕೊಣ್ಣೂರ, ಚೆನ್ನಯ್ಯ ಸಾಲಿಮಠ, ಮಂಜುನಾಥ್ ಬಿದರಿ, ಸೋಮಶೇಖರ ಜತ್ತಿ ಹಾಗೂ ಗ್ರಾಮಸ್ಥರು ಇದ್ದರು.

## ಯೋಗ ಮಾಡಿ ಆರೋಗ್ಯವಂತ ಸಮಾಜ ನಿರ್ಮಾಣಕ್ಕೆ ಕೈಜೋಡಿಸಿ

**ಉದಯರಶ್ಮಿ ದಿನಪತ್ರಿಕೆ**

ಸಿಂದಗಿ: ಪ್ರತಿನಿತ್ಯ ಎಲ್ಲರೂ ಯೋಗಾಭ್ಯಾಸ ಮಾಡುವ ಮೂಲಕ ಆರೋಗ್ಯವಂತ ಸಮಾಜ ನಿರ್ಮಾಣಕ್ಕೆ ಕೈಜೋಡಿಸಬೇಕು ಎಂದು ಶಿಕ್ಷಕ ಸಿದ್ದು ಚಿಂಚೋಳಿ ಹೇಳಿದರು.

ಸಿಂದಗಿ ತಾಲೂಕಿನ ಬ್ಯಾಲಿಹಾಳಬಂಕಲಗಿ ಸರಕಾರಿ ಶಾಲಾ ಆವರಣದಲ್ಲಿ ಹಮ್ಮಿಕೊಂಡ ವಿಶ್ವ ಯೋಗ ದಿನಾಚರಣೆ ಕಾರ್ಯಕ್ರಮವನ್ನು ಸಸಿಗೆ ನೀರುಣಿಸುವ ಮೂಲಕ ಚಾಲನೆ ನೀಡಿ ಮಾತನಾಡಿದ ಅವರು, ಯೋಗವು ಕೇವಲ ವ್ಯಾಯಾಮವಲ್ಲ. ಅದು ಆರೋಗ್ಯಕರ, ಸಂತೋಷಕರ ಮತ್ತು ಸಮತೋಲಿತ ಜೀವನದ ಮಾರ್ಗವಾಗಿದೆ. ಯೋಗವು ದೈಹಿಕ ಆರೋಗ್ಯವನ್ನು ವೃದ್ಧಿಸುವುದರ ಜೊತೆಗೆ ಮಾನಸಿಕ ಒತ್ತಡವನ್ನು ಕಡಿಮೆ ಮಾಡಿ ಏಕಾಗ್ರತೆ, ಆತ್ಮವಿಶ್ವಾಸ ಹಾಗೂ ಸಕಾರಾತ್ಮಕ ಚಿಂತನೆಯನ್ನು ಬೆಳೆಸುತ್ತದೆ ಎಂದು ತಿಳಿಸಿದರು.



ಇದೇ ಸಂದರ್ಭದಲ್ಲಿ ಅತಿಥಿಗಳಾಗಿ ಆಗಮಿಸಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಮಹಾಂತೇಶ ನೂಲಾನವರ, ವರದಿಗಾರ ಶಿವಾನಂದ ಆಲಮೇಲ ಮಾತನಾಡಿ, ಯೋಗವು ದೇಹ, ಮನಸ್ಸು ಮತ್ತು ಆತ್ಮದ ಸಮತೋಲನವನ್ನು ಕಾಪಾಡುವುದಲ್ಲದೆ ದೇಹಕ್ಕೆ ಚೈತನ್ಯ ಮತ್ತು ಶಕ್ತಿಯನ್ನು ನೀಡುತ್ತದೆ. ಇಂದಿನ ಒತ್ತಡದ ಜೀವನ ಶೈಲಿಯಲ್ಲಿ ಯೋಗದ ಮಹತ್ವ ಇನ್ನಷ್ಟು ಹೆಚ್ಚಾಗಿದೆ. ವಿದ್ಯಾರ್ಥಿಗಳು ಬಾಲ್ಯದಿಂದಲೇ ಯೋಗಾಭ್ಯಾಸವನ್ನು ರೂಢಿಸಿಕೊಂಡರೆ ದೈಹಿಕ ಹಾಗೂ ಮಾನಸಿಕ ಆರೋಗ್ಯ ಉತ್ತಮವಾಗಿರುತ್ತದೆ ಎಂದು ಹೇಳಿದರು.

ಈ ವೇಳೆ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಮಾಜಿ ಅಧ್ಯಕ್ಷ ಆನಂದ ಶಾಬಾದಿ, ಎಸ್‌ಡಿಎಂಸಿ ಅಧ್ಯಕ್ಷ ಬಸವರಾಜ ಭಜಂತ್ರಿ, ಮುಖ್ಯೋಪಾಧ್ಯಾಯರಾದ ವಿ.ಎಸ್.ಪಾಟೀಲ, ಎಸ್.ಬಿ.ಪಾಟೀಲ, ಸುಖದೇವ ಹಿರೇಕುರುಬರ, ಶಿಕ್ಷಕರಾದ ಹಮೀದ್ ಅವಟಿ, ರೋಹಿತ ತಳಗೇರಿ, ರಮೇಶ ಪಾಳೇದ, ಶೈಲಾ ಪತ್ತಾರ ಸೇರಿದಂತೆ ಹಲವರು ವೇದಿಕೆ ಮೇಲಿದ್ದರು. ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳು ವಿವಿಧ ಯೋಗಾಸನಗಳು, ಪ್ರಾಣಾಯಾಮ ಹಾಗೂ ಸೂರ್ಯ ನಮಸ್ಕಾರದ ಪ್ರದರ್ಶನ ನೀಡಿದರು. ಯೋಗ ಶಿಕ್ಷಕ ಸಿದ್ಧಲಿಂಗ ಚೌಧರಿ ಅವರ ಮಾರ್ಗದರ್ಶನದಲ್ಲಿ ಸಾಮೂಹಿಕ ಯೋಗಾಭ್ಯಾಸ ನಡೆಸಲಾಯಿತು. ಶಿಕ್ಷಕರು, ಎಸ್‌ಡಿಎಂಸಿ ಸದಸ್ಯರು, ಪೋಷಕರು ಹಾಗೂ ಗ್ರಾಮಸ್ಥರು ಕಾರ್ಯಕ್ರಮದಲ್ಲಿ ಭಾಗವಹಿಸಿ ಯೋಗದ ಮಹತ್ವದ ಕುರಿತು ಅರಿವು ಪಡೆದರು. ಕೊನೆಯಲ್ಲಿ ಎಲ್ಲರೂ ಪ್ರತಿದಿನ ಯೋಗಾಭ್ಯಾಸ ಮಾಡುವ ಸಂಕಲ್ಪ ಕೈಗೊಂಡರು.

## ಸಿಂದಗಿ ತಾಲೂಕಿನಲ್ಲಿ ವಿವಿಧೆಡೆ ವಿಶ್ವ ಯೋಗ ದಿನ ಆಚರಣೆ

**ಉದಯರಶ್ಮಿ ದಿನಪತ್ರಿಕೆ**

ಸಿಂದಗಿ: ಯೋಗವು ಭಾರತೀಯ ಸಂಸ್ಕೃತಿಯ ಅಮೂಲ್ಯ ಕೊಡುಗೆಯಾಗಿದ್ದು ಯೋಗಾಭ್ಯಾಸವನ್ನು ಪ್ರತಿದಿನ ರೂಡಿಸಿಕೊಳ್ಳುವುದರಿಂದ ದೈಹಿಕ ಮತ್ತು ಮಾನಸಿಕ ಆರೋಗ್ಯದ ಸಮತೋಲನಗೊಳ್ಳುತ್ತದೆ. ಆರೋಗ್ಯಕರ ಜೀವನ ಶೈಲಿಗೆ ದಾರಿದೀಪವಾಗಿದೆ ಎಂದು ಸಂಸ್ಥೆಯ ಅಧ್ಯಕ್ಷ ಚಂದ್ರಶೇಖರ ನಾಗರಬೇಟ್ಟ ಹೇಳಿದರು.

ನಗರದ ಕಾವ್ಯ ಸಮೂಹ ಶಿಕ್ಷಣ ಸಂಸ್ಥೆಯ ಪ್ರಾಥಮಿಕ ಹಾಗೂ ಪ್ರೌಢಶಾಲೆಯ ಆವರಣದಲ್ಲಿ ರವಿವಾರ ಅಂತರಾಷ್ಟ್ರೀಯ ಯೋಗ ದಿನದ ನಿಮಿತ್ಯ ಹಮ್ಮಿಕೊಂಡ ಯೋಗ ತರಬೇತಿ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಇಂದಿನ ಕುಲಶಿತ ಆಹಾರ ಸೇವನೆಯಿಂದ ಅನಾರೋಗ ಪಿಡಿತರಾಗುತ್ತಿದ್ದೇವೆ.ಆದರೆ ಯೋಗದಿಂದ ನಮ್ಮ ದೇಹ ಮತ್ತು ಮನಸ್ಸು ಲವಲವಿಕೆಯಿಂದ ವಿಜೃಂಬಿಸುತ್ತದೆ. ನಿತ್ಯ ಯೋಗ ಮಾಡುವುದರಿಂದ ಮನುಷ್ಯನ ಆಯುಷ್ಯ ವೃದ್ಧಿಯಾಗುತ್ತದೆ ಎಂದರು. ಈ ಸಂಧರ್ಭದಲ್ಲಿ ಶಿಕ್ಷಕರಾದ ಕಾವ್ಯ ರಾವುರ, ಅಂಬಿಕಾ ಕುಲಕರ್ಣಿ, ವಿನಾಯಕ ಬಜಂತ್ರಿ, ಅಶೋಕ ನಾವಿ ಅವರು ವಿದ್ಯಾರ್ಥಿಗಳಿಗೆ ಯೋಗದ ವಿವಿಧ ಪ್ರಾತ್ಯಕ್ಷಿಕೆಗಳನ್ನು ಮಾಡಿ ತೋರಿಸಿ ಅದರ ಉಪಯೋಗ ವಿವರಿಸಿದರು. ಕಾರ್ಯಕ್ರಮದಲ್ಲಿ ಸಂಗಮೇಶ್ವರ ಪಾರ್ಮಾ ಮಹಾವಿದ್ಯಾಲಯದ ಪ್ರಾಚಾರ್ಯ ಸಂದೀಪ ಚಾಂದಕವಟೆ, ಸುಮಾ ವಸ್ತ್ರದ, ರೇಣುಕಾ ಬಡಾನೂರ, ಮುಬಿನಾ, ಉಮಾ ಸೇರಿದಂತೆ ವಿದ್ಯಾಥಿಗಳು ಭಾಗವಹಿಸಿದ್ದರು.

**ಪ್ರೇರಣಾ ಪಬ್ಲಿಕ್ ಆಂಗ್ಲ ಮಾಧ್ಯಮ ಪ್ರೌಢಶಾಲೆ**

ಸಿಂದಗಿ ಪಟ್ಟಣದ ರಾಂಪೂರ ರಸ್ತೆಯಲ್ಲಿರುವ ಪ್ರೇರಣಾ ಪಬ್ಲಿಕ್ ಆಂಗ್ಲ ಮಾಧ್ಯಮ ಪ್ರೌಢಶಾಲೆಯಲ್ಲಿ ಅಂತರರಾಷ್ಟ್ರೀಯ ಯೋಗ ದಿನಾಚರಣೆ ಆಚರಿಸಲಾಯಿತು.

ಈ ವೇಳೆ ಸಂಸ್ಥೆಯ ಅಧ್ಯಕ್ಷ ಆರ್.ಡಿ.ಕುಲಕರ್ಣಿ, ಸಂಸ್ಥೆಯ ನಿರ್ದೇಶಕ ಪಿ.ಡಿ.ಕುಲಕರ್ಣಿ, ಶಾಲೆಯ ಮುಖ್ಯ ಗುರುಮಾತೆ ಎಸ್.ಆಯ್.ಅಸ್ಕಿ, ಎಮ್.ಪಿ.ಬುಕ್ಕಾ, ಶಿಕ್ಷಕರಾದ ಸತೀಶ ಕುಲಕರ್ಣಿ, ಅಲ್ತಾಫ್ ತಾಂಬೋಳಿ, ಕಿರಣ ಕುಲಕರ್ಣಿ, ಸಂತೋಷ ಕುಂಟೋಜಿ ಸೇರಿದಂತೆ ಶಾಲೆಯ ಬೋಧಕ ಬೋಧಕೇತರ ಸಿಬ್ಬಂದಿಗಳು ಇದ್ದರು.



**ಶಾಂತವೀರ ಪಟ್ಟಾಧ್ಯಕ್ಷರ ಕನ್ಯಾ ಪ್ರೌಢಶಾಲೆ**

ನಗರದ ತಾಲೂಕು ಶಿಕ್ಷಣ ಪ್ರಸಾರಕ ಮಂಡಳಿಯ ಶಾಂತವೀರ ಪಟ್ಟಾಧ್ಯಕ್ಷರ ಕನ್ಯಾ ಪ್ರೌಢಶಾಲೆಯಲ್ಲಿ ಅಂತರರಾಷ್ಟ್ರೀಯ ಯೋಗ ದಿನಾಚರಣೆ ಆಚರಣೆ ಮಾಡಲಾಯಿತು.

ಈ ವೇಳೆ ಮುಖ್ಯಗುರು ಎಸ್.ಆರ್.ನಾಯಕ, ಶಿಕ್ಷಕರಾದ ಆರ್.ವಾಯ್.ಪರೀಟ್, ಎಸ್.ಎಸ್.ಹತ್ತಿ, ಎಸ್.ವ್ಹಿ.ಮಿರ್ಜಿಕರ, ಎಸ್.ಡಿ.ರಾಠೋಡ, ಡಿ.ಬಿ.ಗಣಾಚಾರಿ, ಸುನೀಲ ನಾಗಾವಿ, ಚೈತನ್ಯಾ ಚಿಂಚೋಳ್ಳಿ ಆರ್.ಎಸ್.ಎಮ್ಮಿ ಸೇರಿದಂತೆ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ವರ್ಗ, ವಿದ್ಯಾರ್ಥಿಗಳು ಇದ್ದರು.

**ಎಚ್.ಜಿ.ಗಂಡು ಮಕ್ಕಳ ಶಾಲೆ**

ನಗರದ ತಾಲೂಕು ಶಿಕ್ಷಣ ಪ್ರಸಾರಕ ಮಂಡಳಿಯ ಎಚ್.ಜಿ.ಗಂಡು ಮಕ್ಕಳ ಪ್ರೌಢಶಾಲೆಯಲ್ಲಿ ಅಂತರರಾಷ್ಟ್ರೀಯ ಯೋಗ ದಿನಾಚರಣೆ ಆಚರಿಸಲಾಯಿತು.

ಈ ವೇಳೆ ಉಪಪ್ರಾಚಾರ್ಯ ಬಿ.ಎ.ಕೂಗೆ, ಶಿಕ್ಷಕರಾದ ಆರ್.ಎಸ್.ಕಾರಜೋಳ, ಎಮ್.ವ್ಹಿ.ಅಡಗಲ್ಲ, ಎಮ್.ಎಸ್.ಧುಮಕನಾಳ, ಸುಮಯ್ಯಾ ವಿಜಾಪೂರ, ಆರ್.ಬಿ.ಸಿಂದಗಿಕರ ಸೇರಿದಂತೆ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ವರ್ಗ, ವಿದ್ಯಾರ್ಥಿಗಳು ಇದ್ದರು.

**ಸಂಗಮೇಶ್ವರ ವಿದ್ಯಾಲಯ**

ನಗರದ ಸಂಗಮೇಶ್ವರ ವಿದ್ಯಾಲಯದ ಸಪ್ತಗಿರಿ ಹಿರಿಯ ಪ್ರಾಥಮಿಕ ಹಾಗೂ ಮಲ್ಲಿಕಾರ್ಜುನ ಪ್ರೌಢಶಾಲೆಯಲ್ಲಿ ಅಂತರರಾಷ್ಟ್ರೀಯ ಯೋಗ ದಿನಾಚರಣೆ ಆಚರಿಸಲಾಯಿತು.

ಈ ವೇಳೆ ಸಂಚಾಲಕ ಗುರುನಾಥ ಅರಳಗುಂಡಗಿ, ಶಿಕ್ಷಕ ಎಸ್.ವಾಯ್ ತಾಳಿಕೋಟಿ, ಶಂಕರ ಮಡ್ನಳ್ಳಿ ಸೇರಿದಂತೆ ಸಂಸ್ಥೆಯ ಅಧ್ಯಕ್ಷರು, ಆಡಳಿತ ಮಂಡಳಿ ಸದಸ್ಯರು, ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ವರ್ಗ, ವಿದ್ಯಾರ್ಥಿಗಳು ಇದ್ದರು.

**ಶ್ರೀಗುರು ಕೃಪಾ ಶಾಲೆ**

ಸಿಂದಗಿ ನಗರದ ಸೋಂಪುರ ರಸ್ತೆಯಲ್ಲಿರುವ ಶ್ರೀಗುರು ಕೃಪಾ ಆಂಗ್ಲಮಾದ್ಯಮ ಪ್ರೌಢಶಾಲೆಯಲ್ಲಿ ಅಂತರರಾಷ್ಟ್ರೀಯ ಯೋಗ ದಿನಾಚರಣೆ ಆಚರಿಸಲಾಯಿತು. ಈ ವೇಳೆ ಸಂಸ್ಥೆಯ ಆಡಳಿತಾಧಿಕಾರಿ, ಎಚ್.ಜಿ.ಪೊದ್ದಾರ, ಮುಖ್ಯಗುರುಮಾತೆ ಹೇಮಾ ಪೊದ್ದಾರ, ವಾಸವಿ ಕುಲಕರ್ಣಿ, ಶೃತಿ ಕುಲಕರ್ಣಿ, ಸೌಮ್ಯ ಪೋದ್ದಾರ, ಪ್ರಸನ್ನ ಕುಲಕರ್ಣಿ ಸೇರಿದಂತೆ ಶಾಲೆಯ ಬೋಧಕ-ಬೋಧಕೇತರ ಸಿಬ್ಬಂದಿಗಳು ಹಾಗೂ ವಿದ್ಯಾರ್ಥಿಗಳು ಇದ್ದರು.

## ಗೋಳಗುಮ್ಮಟದ ಆವರಣದಲ್ಲಿ ವಿಶ್ವ ಯೋಗ ದಿನಾಚರಣೆ

**ಉದಯರಶ್ಮಿ ದಿನಪತ್ರಿಕೆ**

ವಿಜಯಪುರ: ಭಾರತೀಯ ಪುರಾತತ್ವ ಸರ್ವೇಕ್ಷಣ ಇಲಾಖೆ ಧಾರವಾಡ ವಲಯದ ವತಿಯಿಂದ ಅಂತಾರಾಷ್ಟ್ರೀಯ ಯೋಗ ದಿನದ ಅಂಗವಾಗಿ ಆರೋಗ್ಯಕರ ವೃದ್ಧಾಪ್ಯಕ್ಕಾಗಿ ಯೋಗ ಶೀರ್ಷಿಕೆಯಡಿ ಐತಿಹಾಸಿಕ ಗೋಳಗುಮ್ಮಟ ಆವರಣದಲ್ಲಿ ಯೋಗ ದಿನ ಆಚರಿಸಲಾಯಿತು.

ಸಂಸ್ಕೃತಿ ಮಂತ್ರಾಲಯವು ಭಾರತೀಯ ಪುರಾತತ್ವ ಸರ್ವೇಕ್ಷಣ ಅಧೀನದಲ್ಲಿರುವ ದೇಶದ 100 ಐತಿಹಾಸಿಕ ತಾಣಗಳಲ್ಲಿ ವಿಶೇಷ ಯೋಗ ಕಾರ್ಯಕ್ರಮಗಳು ಹಾಗೂ ಸಾಂಸ್ಕೃತಿಕ ಪರಂಪರೆ ಸಂಯೋಜಿತ ಚಟುವಟಿಕೆಗಳನ್ನು ಆಯೋಜಿಸಲಾಗಿತ್ತು. ಬಾದಾಮಿ ಗುಹೆಗಳು, ಐಹೊಳೆ ದುರ್ಗಾ ದೇವಾಲಯ ಮತ್ತು ಪಟ್ಟದಕಲ್ಲಿನ ದೇವಾಲಯಗಳ ಸಮೂಹಗಳಲ್ಲಿ ಯೋಗ ಕಾರ್ಯಕ್ರಮಗಳು ಏಕಕಾಲಕ್ಕೆ ನಡೆದವು.

ಈ ವರ್ಷದ ಆಚರಣೆಯ ಮುಖ್ಯ ಉದ್ದೇಶವು ಯೋಗದ ಮೂಲಕ ದೀರ್ಘಾಯುಷ್ಯ, ಸಕ್ರಿಯ ಜೀವನಶೈಲಿ ಹಾಗೂ ಎಲ್ಲಾ ತಲೆಮಾರುಗಳ ದೈಹಿಕ ಮತ್ತು ಮಾನಸಿಕ ಆರೋಗ್ಯವನ್ನು ಉತ್ತೇಜಿಸುವುದಾಗಿದೆ.

ನಗರದ ಗೋಳಗುಮ್ಮಟದಲ್ಲಿ ಬೆಳಗ್ಗೆ 6:20 ರಿಂದ 7ರವರೆಗೆ ಪ್ರಧಾನಿ ನರೇಂದ್ರ ಮೋದಿ ಅವರು ಯೋಗ ದಿನಾಚರಣೆಯ ಕುರಿತು ಮಾತನಾಡುವ ನೇರಪ್ರಸಾರದ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ವಿಜಯಪುರ ಉಪವಿಭಾಗದ ಸಹಾಯಕ ಆಯುಕ್ತರು ಗುರುನಾಥ ದಡ್ಡೆ ಮುಖ್ಯ ಅತಿಥಿಯಾಗಿ ಭಾಗವಹಿಸಿದರು. ಯೋಗ ಗುರು ಸುರೇಶ್ ಆನಂದಿ, ವಿವಿಧ ಯೋಗಾಸನಗಳನ್ನು ಪ್ರದರ್ಶಿಸಿ ತರಬೇತಿ ನೀಡಿದರು.

ಭಾರತೀಯ ಪುರಾತತ್ವ ಸರ್ವೇಕ್ಷಣ, ಧಾರವಾಡ ವಲಯದ ಉಪ ಅಧೀಕ್ಷಕ ಪುರಾತತ್ವ ಅಭಿಯಂತರ ಎನ್. ಬಿ. ಡಿ. ಕೆಂಪಗೌಡ ಅವರು ವಿಜಯಪುರದ ಯೋಗ ದಿನಾಚರಣೆಯ ನೋಡಲ್ ಅಧಿಕಾರಿಯಾಗಿದ್ದರು. ರಾಷ್ಟ್ರೀಯ ಯುವ ಪ್ರಶಸ್ತಿ ಪುರಸ್ಕೃತರ ರಾಷ್ಟ್ರೀಯ ಅಧ್ಯಕ್ಷ ಡಾ. ಜಾವಿದ್ ಜಮಾದಾರ್, ಬಿಎಲ್ ಡಿಇ ಸಂಸ್ಥೆಯ ಶ್ರೀಮಂತಿ ಬಂಗಾರಮ್ಮ ಸಜ್ಜನ ಕಲಾ ಮತ್ತು ವಾಣಿಜ್ಯ ಮಹಾವಿದ್ಯಾಲಯದ ಪ್ರಾಂಶುಪಾಲರಾದ ಡಾ. ವೈ. ತಮ್ಮಣ್ಣ, ಹಾಗೂ ಅಣು ವಿಜ್ಞಾನ ಮತ್ತು ಶಾಂತಿ ಕುರಿತ ಅಂತರರಾಷ್ಟ್ರೀಯ ಸಮ್ಮೇಳನದಲ್ಲಿ ಭಾರತವನ್ನು ಪ್ರತಿನಿಧಿಸಲಿರುವ ಶಿಫಾ ಜಮಾದಾರ್ ಅವರು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

ಶ್ರೀಮತಿ ಬಂಗಾರಮ್ಮ ಸಜ್ಜನ ಕಲಾ ಮತ್ತು ವಾಣಿಜ್ಯ ಮಹಾವಿದ್ಯಾಲಯ, ಡಾ. ಬಿ.ಆರ್. ಅಂಬೇಡ್ಕರ್ ಮಹಿಳಾ ವಸತಿನಿಲಯ, ಸಮಾಜ ಕಲ್ಯಾಣ ಇಲಾಖೆ ಹಾಗೂ ವಿಕಾಸ್ ಹೈಸ್ಕೂಲ್ ಹಾಗೂ ವಿವಿಧ ಶಾಲೆಯ ಸುಮಾರು 500 ಹೆಚ್ಚು ವಿದ್ಯಾರ್ಥಿಗಳು ಅಂತರರಾಷ್ಟ್ರೀಯ ಯೋಗ ದಿನಾಚರಣೆಯಲ್ಲಿ ಭಾಗವಹಿಸಿದ್ದರು.



# "ಅತ್ಯುತ್ತಮ ಶಿಕ್ಷಕ ಪ್ರಶಸ್ತಿ"ಗೆ ಪ್ರಶಾಂತ್ ಕುಲಕರ್ಣಿ ಆಯ್ಕೆ

■ ಉದಯರಶ್ಮಿ ದಿನಪತ್ರಿಕೆ



ಸಿಂದಗಿ: ಅಂತರಾಷ್ಟ್ರೀಯ ಹಿಂದೂ ಮಹಾಸಭಾ ಕರ್ನಾಟಕ ವತಿಯಿಂದ ಜೂನ್ 24 ರಂದು ಬಾಗಲಕೋಟೆಯ ಲಯನ್ಸ್ ಕ್ಲಬ್ ಸಭಾಭವನದಲ್ಲಿಆಯೋಜಿಸಲಾಗಿರುವ ಸಮಾರಂಭದಲ್ಲಿ ವಿಜಯಪುರ ಜಿಲ್ಲೆಯ ಸಿಂದಗಿಯ ಶ್ರೀ ಪದ್ಮರಾಜ ಶಿಕ್ಷಣ ಮಹಾವಿದ್ಯಾಲಯದ ಉಪನ್ಯಾಸಕರಾದ ಶ್ರೀ ಪ್ರಶಾಂತ್ ಕುಲಕರ್ಣಿ ಅವರು 2026ನೇ ಸಾಲಿನ ರಾಷ್ಟ್ರಮಟ್ಟದ ಅತ್ಯುತ್ತಮ ಶಿಕ್ಷಕ ಪ್ರಶಸ್ತಿಗೆ ಆಯ್ಕೆಯಾಗಿದ್ದಾರೆ ಎಂದು ಅಂತರಾಷ್ಟ್ರೀಯ ಹಿಂದೂ ಮಹಾಸಭಾ ಕರ್ನಾಟಕದ ವಿದ್ಯಾರ್ಥಿ ಘಟಕದ ರಾಜ್ಯಾಧ್ಯಕ್ಷರಾದ ಸಾಗರ್ ಕಲಾದಗಿ ತಿಳಿಸಿದ್ದಾರೆ.


ಶಿಕ್ಷಣ ಕ್ಷೇತ್ರದಲ್ಲಿ ಸಲ್ಲಿಸಿರುವ ವಿಶಿಷ್ಟ ಸೇವೆ, ವಿದ್ಯಾರ್ಥಿಗಳ ಶೈಕ್ಷಣಿಕ ಬೆಳವಣಿಗೆಗೆ ನೀಡಿರುವ ಕೊಡುಗೆ, ಸ್ಪರ್ಧಾತ್ಮಕ ಪರೀಕ್ಷೆಗಳ ತರಬೇತಿ, ಸಾಮಾಜಿಕ ಹಾಗೂ ಶೈಕ್ಷಣಿಕ ಚಟುವಟಿಕೆಗಳಲ್ಲಿ ಸಕ್ರಿಯ ಪಾಲ್ಗೊಳ್ಳುವಿಕೆ ಮತ್ತು ಶಿಕ್ಷಣದ ಗುಣಮಟ್ಟ ಹೆಚ್ಚಿಸಲು ಕೈಗೊಂಡಿರುವ ಪ್ರಯತ್ನಗಳನ್ನು ಪರಿಗಣಿಸಿ ಈ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ ಎಂದು ಅವರು ತಿಳಿಸಿದ್ದಾರೆ.

ಈ ಕುರಿತು ಪ್ರತಿಕ್ರಿಯಿಸಿದ ಪ್ರಶಾಂತ್ ಕುಲಕರ್ಣಿ ಅವರು, "ಈ ಗೌರವವು ಕೇವಲ ನನ್ನ ವೈಯಕ್ತಿಕ ಸಾಧನೆಯಲ್ಲ. ನನ್ನ ಕುಟುಂಬದವರು, ಸ್ನೇಹಿತರು, ಸಮಾಜದ ಬಂಧುಗಳು, ಗುರುಹಿರಿಯರು, ಸಹೋದ್ಯೋಗಿಗಳು ಹಾಗೂ ವಿದ್ಯಾರ್ಥಿಗಳ ಪ್ರೀತಿ, ಪ್ರೋತ್ಸಾಹ ಮತ್ತು ಆಶೀರ್ವಾದಗಳ ಪ್ರತಿಫಲವಾಗಿದೆ. ಸದಾ ನನ್ನನ್ನು ಬೆಂಬಲಿಸಿ ಹಾರೈಸಿದ ಎಲ್ಲರಿಗೂ ನಾನು ಚಿರಋಣಿಯಾಗಿದ್ದೇನೆ" ಎಂದು ಕೃತಜ್ಞತೆ ವ್ಯಕ್ತಪಡಿಸಿದ್ದಾರೆ.

ಅಲ್ಲದೆ, ತಮ್ಮನ್ನು ಈ ಪ್ರಶಸ್ತಿಗೆ ಆಯ್ಕೆ ಮಾಡಿದ ಅಂತರಾಷ್ಟ್ರೀಯ ಹಿಂದೂ ಮಹಾಸಭಾ ಕರ್ನಾಟಕದ ಅಧ್ಯಕ್ಷರು ಹಾಗೂ ಪದಾಧಿಕಾರಿಗಳಿಗೆ ಧನ್ಯವಾದಗಳನ್ನು ಸಲ್ಲಿಸಿದ ಅವರು, "ಈ ಪ್ರಶಸ್ತಿಯು ನನ್ನ ಜವಾಬ್ದಾರಿಯನ್ನು ಮತ್ತಷ್ಟು ಹೆಚ್ಚಿಸಿದ್ದು, ಮುಂದಿನ ದಿನಗಳಲ್ಲಿ ಶಿಕ್ಷಕ ವೃತ್ತಿಯಲ್ಲಿ ಇನ್ನಷ್ಟು ಸಕ್ರಿಯವಾಗಿ ತೊಡಗಿಸಿಕೊಳ್ಳಲು ಹಾಗೂ ಶಿಕ್ಷಣ ಕ್ಷೇತ್ರದಲ್ಲಿ ಪ್ರಾಮಾಣಿಕ ಸೇವೆ ಸಲ್ಲಿಸಲು ಹೆಚ್ಚಿನ ಪ್ರೇರಣೆ ನೀಡಿದೆ" ಎಂದು ಹರ್ಷ ವ್ಯಕ್ತಪಡಿಸಿದ್ದಾರೆ.

ಪ್ರಶಾಂತ್ ಕುಲಕರ್ಣಿ ಅವರ ಈ ಸಾಧನೆಗೆ ಶಿಕ್ಷಣ ಕ್ಷೇತ್ರದ ಗಣ್ಯರು, ವಿವಿಧ ಸಂಘ–ಸಂಸ್ಥೆಗಳ ಪದಾಧಿಕಾರಿಗಳು, ಸ್ನೇಹಿತರು ಹಾಗೂ ಹಿತೈಷಿಗಳು ಅಭಿನಂದನೆ ಸಲ್ಲಿಸಿದ್ದಾರೆ.

# ಬೆಳಗಾವಿ ಪೀಠದಲ್ಲಿ ನಿತ್ಯ 100 ಅರ್ಜಿ ವಿಚಾರಣೆ



■ ಉದಯರಶ್ಮಿ ದಿನಪತ್ರಿಕೆ

**ಕರ್ನಾಟಕ ಮಾಹಿತಿ ಆಯೋಗದ ಬೆಳಗಾವಿ ಪೀಠದ ರಾಜ್ಯ ಮಾಹಿತಿ ಆಯುಕ್ತರಾದ ಪ್ರಕಾಶ ನಾರಾಯಣ ಚನ್ನಾಳ ಮಾಹಿತಿ**

ವಿಜಯಪುರ: ಪ್ರಜಾಪ್ರಭುತ್ವ ವ್ಯವಸ್ಥೆಯ ಭದ್ರ ಬುನಾದಿಯಾಗಿರುವ ಮಾಹಿತಿ ಹಕ್ಕು ಕಾಯ್ದೆಯಡಿ ಆಯೋಗದ ಬೆಳಗಾವಿ ಪೀಠದಲ್ಲಿ ನಿತ್ಯ ಸುಮಾರು 60–100 ಅರ್ಜಿಗಳ ವಿಚಾರಣೆ ಆಫ್ ಲೈನ್ ಹಾಗೂ ಆನ್ ಲೈನ್ ನಲ್ಲಿ ನಡೆಯುತ್ತಿವೆ ಎಂದು ಕರ್ನಾಟಕ ಮಾಹಿತಿ ಆಯೋಗದ ಬೆಳಗಾವಿ ಪೀಠದ ರಾಜ್ಯ ಮಾಹಿತಿ ಆಯುಕ್ತ ಪ್ರಕಾಶ ನಾರಾಯಣ ಚನ್ನಾಳ ತಿಳಿಸಿದ್ದಾರೆ.

ಮಾಹಿತಿ ಹಕ್ಕು ಅಧಿನಿಯಮ ಮಾಹಿತಿಯನ್ನು ಸಾಮಾನ್ಯ ಜನರಿಗೆ ನೀಡದಿರುವುದು. ವಿಚಾರಣೆಗೆ ಗೈರು ಹಾಜರಾಗಿರುವುದು ಹಾಗೂ ಆಯೋಗದ ನೋಟಿಸ್ ಗಳಿಗೆ ಸ್ಪಂದಿಸದಿರುವ ವಿವಿಧ ಇಲಾಖೆಗಳ ಅಧಿಕಾರಿಗಳಿಗೆ ಶಿಸ್ತು ಕ್ರಮ ಜರುಗಿಸಲಾಗುವುದು. ವಿಚಾರಣೆ ಸಮಿತಿಯ ಶಿಫಾರಸ್ಸಿನನ್ವಯ 25 ಸಾವಿರ ರೂ. ವರೆಗೆ ದಂಡ ಮತ್ತು ಅರ್ಜಿದಾರರಿಗೆ ಪರಿಹಾರದ ಆದೇಶ ನೀಡಲಾಗುತ್ತಿದೆ ಎಂದವರು ತಿಳಿಸಿದ್ದಾರೆ.

ಸ್ವತಂತ್ರ ಭಾರತದಲ್ಲಿ ಸಾಮಾನ್ಯ ಜನರಿಗೆ ಸರ್ಕಾರದ ಮಾಹಿತಿ ಸುಲಭವಾಗಿ ತಲುಪಬೇಕೆಂಬ ಉದ್ದೇಶ ಹೊಂದಿರುವ ಅತ್ಯಂತ ಕ್ರಾಂತಿಕಾರಕ ಕಾಯ್ದೆ ಇದಾಗಿದೆ ಎಂದು ಕರ್ನಾಟಕ ಮಾಹಿತಿ ಆಯೋಗದ ಬೆಳಗಾವಿ ಪೀಠದ ರಾಜ್ಯ ಮಾಹಿತಿ ಆಯುಕ್ತರಾದ ಪ್ರಕಾಶ ನಾರಾಯಣ ಚನ್ನಾಳ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕೇಂದ್ರ ಕಾರಾಗೃಹದಲ್ಲಿ ವಿಶ್ವ ಯೋಗ ದಿನಾಚರಣೆ



■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಕಾರಾಗೃಹವು ಕೇವಲ ಬಂದಿಗಳ ಕೇಂದ್ರವಲ್ಲ, ಇದೊಂದು ಸುಧಾರಣಾ ಕೇಂದ್ರವಾಗಿದೆ ಎಂದು ಕಾರಾಗೃಹದ ಅಧೀಕ್ಷಕರಾದ ಮಲ್ಲಿಕಾರ್ಜುನ ಎಸ್. ಮಾಳಿ ಅವರು ಹೇಳಿದರು. ಅವರು ನಗರದ ಕೇಂದ್ರ ಕಾರಾಗೃಹದಲ್ಲಿ ಆಯೋಜಿಸಲಾಗಿದ್ದ ಅಂತರಾಷ್ಟ್ರೀಯ ಯೋಗ ದಿನಾಚಾರಣೆಯ ಅಂಗವಾಗಿ ಯೋಗ ತರಬೇತಿ ಸಪ್ತಾಹ ಕಾರ್ಯಕ್ರಮದಲ್ಲಿ ಮಾತನಾಡಿದರು.

ಬಂದಿಗಳಲ್ಲಿ ಪರಿವರ್ತನೆ ತರುವ ಪರಿವರ್ತನಾ ನಿಲಯವೂ ಆಗಿದೆ. ದೈನಂದಿನ ಯೋಗಾಭ್ಯಾಸವು ಬಂದಿಗಳ ಪುನರ್ವಸತಿ ಹಾಗೂ ವ್ಯಕ್ತಿತ್ವ ವಿಕಸನಕ್ಕೆ ಅತ್ಯಂತ ಸಹಕಾರಿಯಾಗಿದ್ದು, ಪ್ರತಿಯೊಬ್ಬರೂ ನಿಯಮಿತವಾಗಿ ಯೋಗಾಭ್ಯಾಸವನ್ನು ರೂಢಿಸಿಕೊಳ್ಳಬೇಕು. ಮುಂಬರುವ ದಿನಗಳಲ್ಲಿ ಕಾರಾಗೃಹದಲ್ಲಿ ನಿರಂತರವಾಗಿ ಯೋಗಾಭ್ಯಾಸ ಕಾರ್ಯಕ್ರಮಗಳು ಹಮ್ಮಿಕೊಳ್ಳಲಾಗುವುದು. ಕಾರಾಗೃಹದ ಬಂದಿಗಳನ್ನು ಉತ್ತಮ ನಾಗರೀಕರಾಗಿ ಸಮಾಜದ ಮುಖ್ಯ ವಾಹಿನಿಗೆ ಕಳುಹಿಸಲು ಶ್ರಮಿಸುವುದಾಗಿ ಹೇಳಿದರು.

ಆರ್ಟ ಆಫ್ ಲಿವಿಂಗ್ ಶ್ರೀ ಬಿ.ಎಂ. ಪಾಟೀಲ ಗುರೂಜಿ ಮಾತನಾಡಿ, ಯೋಗವು ದೈಹಿಕ ಮತ್ತು ಮಾನಸಿಕ ಆರೋಗ್ಯ ವೃದ್ಧಿಗೆ ಸಹಕಾರಿಯಾಗುವುದರ ಜೊತೆಗೆ ಒತ್ತಡ ನಿವಾರಣೆ, ಏಕಾಗ್ರತೆ ಮತ್ತು ಆತ್ಮವಿಶ್ವಾಸ ಹೆಚ್ಚಿಸಲು ನೆರವಾಗುತ್ತದೆ ಎಂದು ಹೇಳಿದರು.

ಶಿಕ್ಷಕ ಡಿ.ಎಸ್.ದೀಕ್ಷಿತ ನಿರೂಪಿಸಿದರು. ಸಹಾಯಕ ಅಧಿಕ್ಷಕರಾದ ಅಭಿಜಿತ್ ಜಾಯಕ್ಕನವರ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

# ವಿಕಲಚೇತನರ ಕುಂದುಕೊರತೆ ಸಭೆ ಜೂ.24 ಕ್ಕೆ ಮುಂದೂಡಿಕೆ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ವಿಕಲಚೇತನರ ಹಕ್ಕುಗಳ ಅಧಿನಿಯಮ– 2016ರ ಕಲಂ 72ರ ಅನ್ವಯ ಹಮ್ಮಿಕೊಳ್ಳಲಾಗಿದ್ದ ಜಿಲ್ಲಾ ಮಟ್ಟದ ಸಮಿತಿ ಸಭೆಯನ್ನು ಜೂನ್ 24ಕ್ಕೆ ಮುಂದೂಡಲಾಗಿದೆ.

ಈ ಮೊದಲು ಜೂನ್ 23ರಂದು ನಿಗದಿಯಾಗಿದ್ದ ಸಭೆಯು, ಇದೀಗ ಜೂನ್ 24ರಂದು ಬೆಳಿಗ್ಗೆ 11:30ಕ್ಕೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜರುಗಲಿದೆ.

ವಿಕಲಚೇತನರ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಸ್ವಯಂ ಸೇವಾ ಸಂಸ್ಥೆಗಳ ಮುಖ್ಯಸ್ಥರು ಹಾಗೂ ವಿಕಲಚೇತನರು ಈ ಸಭೆಗ ಹಾಜರಾಗುವಂತೆಯೂ ಈ ಬಗ್ಗೆ ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 08352–796060 ಸಂಪರ್ಕಿಸುವಂತೆ

ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಅಧಿಕಾರಿಗಳ ಪ್ರಕಟಣೆ ತಿಳಿಸಿದೆ.

# ಯೋಗ ಆರೋಗ್ಯಕರ ಜೀವನಕ್ಕೆ ಬುನಾದಿ : ಪಂಚಾಕ್ಷರಿ

■ ಉದಯರಶ್ಮಿ ದಿನಪತ್ರಿಕೆ



ದೇವರಹಿಪ್ಪರಗಿ: ಯೋಗವು ಭಾರತೀಯ ಪಾರಂಪರಿಕವಾದ ದೈಹಿಕ, ಮಾನಸಿಕ ಮತ್ತು ಆಧ್ಯಾತ್ಮಿಕ ಅಭ್ಯಾಸವಾಗಿದೆ ಎಂದು ಯೋಗಪಟು ಪಂಚಾಕ್ಷರಿ ಮಿಂಚನಾಳ ಹೇಳಿದರು.

ಪಟ್ಟಣದ ಸಿದ್ಧೇಶ್ವರ ಪ್ರೌಢಶಾಲೆಯ ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರಿಗೆ ವಿಶ್ವ ಯೋಗಾ ದಿನಾಚರಣೆಯ ಅಂಗವಾಗಿ ಭಾನುವಾರ ಸಾಮೂಹಿಕ ಯೋಗಾಭ್ಯಾಸದ ಮಾಹಿತಿ ಹಾಗೂ ತರಬೇತಿ ನೀಡಿ ಮಾತನಾಡಿದರು. ಯೋಗವನ್ನು ವಿದ್ಯಾರ್ಥಿಗಳು ತಮ್ಮ ಶಾಲಾ ಜೀವನದಿಂದ ಅಳವಡಿಸಿಕೊಂಡು ಮುಂದುವರೆಸಿದ್ದೇಯಾದರೆ ಸದೃಢ ಶರೀರದೊಂದಿಗೆ ಸದೃಡ ಮನಸ್ಸನ್ನು ಹೊಂದಿ ಭವ್ಯ ಭವಿಷ್ಯದ ರೂವಾರಿಗಳಾಗಿವುದರಲ್ಲಿ ಸಂದೇಹವಿಲ್ಲ. ಯೋಗ ಆರೋಗ್ಯಕರ ಜೀವನಕ್ಕೆ ಬುನಾದಿ ಒದಗಿಸುತ್ತದೆ ಆದ್ದರಿಂದ ಯೋಗವನ್ನು ಒಂದೇ ದಿನಕ್ಕೆ ಸೀಮಿತಗೊಳಿಸದೇ ಜೀವಿತದ ಅವಧಿಯವರೆಗೂ ಪಾಲಿಸಬೇಕೆಂದು ಕರೆ ನೀಡಿದರು.

ನಂತರ ತಾಡಾಸನ, ಬಸ್ತಿಕಾ ಪ್ರಾಣಾಯಾಮ, ಅನುಲೋಮ ವಿಲೋಮ, ಬ್ರಾಮರಿ, ವೃಕ್ಷಾಸನ, ಶಾಂತಿಮಂತ್ರ, ಧ್ಯಾನ ಸೇರಿದಂತೆ ಯೋಗದ ವಿವಿಧ ಆಸನಗಳ ತರಬೇತಿ ನೀಡಿದರು.

ಸಂಸ್ಥೆಯ ಮುಖ್ಯಸ್ಥ ವ್ಹಿ.ಕೆ.ಪಾಟೀಲ, ಯೋಗ ಉತ್ಸವ ಸಮಿತಿಯ ತಾಲ್ಲೂಕು ಅಧ್ಯಕ್ಷ ಸಿ.ಕೆ.ಕುದರಿ, ಆಡಳಿತಾಧಿಕಾರಿ ಕೆ.ಪಿ.ಮಾಲಿಪಾಟೀಲ, ಎಂ.ಆರ್.ಮಠ, ಸಂಗಪ್ಪಣ್ಣ ತಡವಲ್, ನರೇಂದ್ರ ನಾಡಗೌಡ, ಶಾಂತಪ್ಪ ಪಡನೂರ, ಆನಂದ ಜಡಿಮಠ, ರವಿ ಕೋಟಿನ್, ಸೇರಿದಂತೆ ಶಾಲೆಯ ಸಿಬ್ಬಂದಿ ಹಾಗೂ ಐದನೂರಕ್ಕೂ ಹೆಚ್ಚು ವಿದ್ಯಾರ್ಥಿಗಳು ಭಾಗವಹಿಸಿದ್ದರು.

# ಯೋಗ ಪ್ರತಿದಿನ ಜೀವನದಲ್ಲಿ ಅಳವಡಿಸಿಕೊಳ್ಳಿ :ಶಾಸಕ ಸವದಿ

■ ಉದಯರಶ್ಮಿ ದಿನಪತ್ರಿಕೆ



ಅಥಣಿ: ಯೋಗವು ನಮ್ಮ ಬದುಕಿನಲ್ಲಿ ಹೊಸ ಆಯಾಮವನ್ನು ತಂದುಕೊಡುವುದರ ಜೊತೆಗೆ ರೋಗಮುಕ್ತ ಸಮಾಜ ನಿರ್ಮಾಣಕ್ಕೆ ಮಹತ್ವದ ಕೊಡುಗೆ ನೀಡುತ್ತದೆ. ಆದ್ದರಿಂದ ಯೋಗವನ್ನು ಕೇವಲ ವಿಶ್ವ ಯೋಗ ದಿನಾಚರಣೆಗೆ ಸೀಮಿತಗೊಳಿಸದೆ, ವರ್ಷದ ಎಲ್ಲಾ ದಿನಗಳಲ್ಲೂ ಜೀವನದ ಭಾಗವನ್ನಾಗಿಸಿಕೊಳ್ಳಬೇಕು ಎಂದು ಶಾಸಕ ಲಕ್ಷ್ಮಣ ಸವದಿ ಹೇಳಿದರು.

ಅವರು ಅಥಣಿ ಪಟ್ಟಣದ ಎಸ್.ಎಸ್.ಎಂ.ಎಸ್. ಕಾಲೇಜು ಆವರಣದಲ್ಲಿ ಹಮ್ಮಿಕೊಂಡಿದ್ದ 12ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಇಂದಿನ ಬದಲಾದ ಆಹಾರ ಪದ್ಧತಿ ಹಾಗೂ ಜೀವನಶೈಲಿಯಿಂದ ಜನರು ವಿವಿಧ ಆರೋಗ್ಯ ಸಮಸ್ಯೆಗಳಿಗೆ ತುತ್ತಾಗುತ್ತಿದ್ದಾರೆ. ಆರೋಗ್ಯಕರ ಮತ್ತು ರೋಗಮುಕ್ತ ಜೀವನ ನಡೆಸಬೇಕಾದರೆ ಪ್ರತಿದಿನ ಯೋಗಾಭ್ಯಾಸವನ್ನು ರೂಢಿಸಿಕೊಳ್ಳುವುದು ಅವಶ್ಯಕ ಎಂದು ಹೇಳಿದರು.

ನಂತರ ಮಾತನಾಡಿದ ತಹಸೀಲ್ದಾರ್ ಸಿದ್ರಾಯ ಬೋಸಗಿ, ಯೋಗವು ಭಾರತೀಯ ಸಂಸ್ಕೃತಿಯ ಅಮೂಲ್ಯ ಕೊಡುಗೆಯಾಗಿದ್ದು, ದೈಹಿಕ ಆರೋಗ್ಯದ ಜೊತೆಗೆ ಮಾನಸಿಕ ನೆಮ್ಮದಿ ಮತ್ತು ಆತ್ಮವಿಶ್ವಾಸವನ್ನು ಹೆಚ್ಚಿಸುತ್ತದೆ ಎಂದರು.

ಇಂದಿನ ಒತ್ತಡದ ಬದುಕಿನಲ್ಲಿ ಯೋಗಾಭ್ಯಾಸ ಅತ್ಯಂತ ಅಗತ್ಯವಾಗಿದ್ದು, ಪ್ರತಿಯೊಬ್ಬರೂ ಪ್ರತಿದಿನ ಸ್ವಲ್ಪ ಸಮಯವನ್ನು ಯೋಗಕ್ಕಾಗಿ ಮೀಸಲಿಡಬೇಕು. ಯೋಗದಿಂದ ದೇಹದ ರೋಗನಿರೋಧಕ ಶಕ್ತಿ ವೃದ್ಧಿಯಾಗುವುದರ ಜೊತೆಗೆ ಮನಸ್ಸಿನ ಏಕಾಗ್ರತೆ ಹೆಚ್ಚುತ್ತದೆ. ವಿದ್ಯಾರ್ಥಿಗಳು, ಯುವಕರು ಹಾಗೂ ಸಾರ್ವಜನಿಕರು ಯೋಗವನ್ನು ತಮ್ಮ ದಿನಚರಿಯ ಭಾಗವನ್ನಾಗಿಸಿಕೊಳ್ಳುವ ಮೂಲಕ ಆರೋಗ್ಯವಂತ ಸಮಾಜ ನಿರ್ಮಾಣಕ್ಕೆ ಕೈಜೋಡಿಸಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಪುರಸಭೆ ಅಧ್ಯಕ್ಷೆ ಶಿವಲೀಲಾ ಬೂಟಾಳಿ, ಸ್ಥಾಯಿ ಸಮಿತಿ ಅಧ್ಯಕ್ಷ ದತ್ತಾ ವಾಸ್ಟರ್, ಉಪಾಧ್ಯಕ್ಷೆ ಭುವನೇಶ್ವರಿ ಯಂಕಚ್ಚಿ, ಶಿವಾನಂದ ಕಲ್ಲಾಪುರ, ಡಿಎಸ್ಪಿ ಪ್ರಶಾಂತ ಮುನ್ನೊಳಿ,ಎಂ.ಆರ್. ಮುಂಜಿ, ಅಶೋಕ ಗುಡಿಮನಿ, ಪ್ರವೀಣ ಹುಣಸಿಕಟ್ಟಿ, ಬಿ.ಜಿ.ಕಾಗೆ, ಮಲ್ಲಿಕಾರ್ಜುನ ಮಗದೂಮ, ಸಿಪಿಐ.ಸಂತೋಷ ಹಳ್ಳೂರ, ಡಾ.ಮಲ್ಲಿಕಾರ್ಜುನ ಹಂಜಿ, ರಾಮಣ್ಣ ಧರಿಗೌಡ, ಶಿವಾನಂದ ಮಾಳಗಾಂವಿ, ಸುರೇಶ ಚಿಕ್ಕಟ್ಟಿ,ವಿವಿಧ ಯೋಗಾಸನಗಳ ಪ್ರದರ್ಶನ ನಡೆಯಿತು. ವಿವಿಧ ಇಲಾಖೆಗಳ ಅಧಿಕಾರಿಗಳು, ಶಿಕ್ಷಕರು, ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಭಾಗವಹಿಸಿ ಯೋಗಾಭ್ಯಾಸ ಮಾಡಿದರು.

ಅಂತರಾಷ್ಟ್ರೀಯ ಯೋಗ ಗುರು ಭವರಲಾಲ ಆರ್ಯ ಅವರು ಯೋಗಾಸನವನ್ನು ಹೇಳಿಕೊಟ್ಟರು.

# ಕಬಿನಿ ಹಿನ್ನೀರಿಗೆ ತ್ಯಾಜ್ಯ ಸುರಿದರೆ ಕಾನೂನು ಕ್ರಮ

## ಕಾರ್ಯಪಾಲಕ ಇಂಜಿನಿಯರ್ ರಂಗಯ್ಯ ಕಿಡಿಗೇಡಿಗಳಿಗೆ ಎಚ್ಚರಿಕೆ

■ ಉದಯರಶ್ಮಿ ದಿನಪತ್ರಿಕೆ



ಎಚ್ ಡಿ ಕೋಟೆ: ತಾಲೂಕಿನ ಬೀಚನಹಳ್ಳಿ ಗ್ರಾಮದಲ್ಲಿರುವ ಕಬಿನಿ ಜಲಾಶಯದ ಹಿನ್ನೀರಿಗೆ ಮಾನವ ಮಲ ಮತ್ತು ತ್ಯಾಜ್ಯ ನೀರು ಬಿಟ್ಟಿರುವ ಬಗ್ಗೆ ಅಂತರಸಂತೆ ಪೊಲೀಸ್ ಪೊಲೀಸ್ ಠಾಣೆಗೆ ದೂರು ನೀಡಲಾಗಿದ್ದು, ಕಿಡಿಗೇಡಿಗಳ ವಿರುದ್ಧ ಸೂಕ್ತ ಕ್ರಮ ಜರಗಿಸುವಂತೆ ಒತ್ತಾಯ ಮಾಡಲಾಗಿದೆ ಎಂದು ಕಬಿನಿ ಜಲಾಶಯ ಉಪವಿಭಾಗದ ಕಾರ್ಯಪಾಲಕ ಇಂಜನಿಯರ್ ರಂಗಯ್ಯ ಹೇಳಿದರು.

ಬೀಚನಹಳ್ಳಿ ಗ್ರಾ.ಪಂ. ವ್ಯಾಪ್ತಿಯ ಕಬಿನಿ ಹಿನ್ನೀರಿನಲ್ಲಿ ತ್ಯಾಜ್ಯ ಸುರಿದಿದ್ದ ಸ್ಥಳ ಪರಿಶೀಲನೆ ನಡೆಸಿದ ಬಳಿಕ ಮಾತನಾಡಿದ ರಂಗಯ್ಯ ಅವರು, ಮಾನವ ತ್ಯಾಜ್ಯ ಮತ್ತು ಇತರೆ ತ್ಯಾಜ್ಯವನ್ನ ಕಬಿನಿ ಹಿನ್ನೀರಿಗೆ ಸುರಿದಿರುವುದು ಸ್ಥಳ ಪರಿಶೀಲನೆ ವೇಳೆ ತಿಳಿದುಬಂದಿದೆ. ಕಬಿನಿ ಹಿನ್ನೀರಿಗೆ ತ್ಯಾಜ್ಯ ಸುರಿಯುವುದು, ನೀರು ಕಲುಷಿತಗೊಳಿಸುವುದು ಅಕ್ಷಮ್ಯ ಅಪರಾಧ. ಇದೊಂದು ಗಂಭೀರ ಪ್ರಕರಣವಾಗಿದ್ದು, ಈ ಸಂಬಂಧ ಪೊಲೀಸ್ ಠಾಣೆ ಜೊತೆಗೆ ಪರಿಸರ ಇಲಾಖೆಗೆ ಪತ್ರ ಬರೆಯಲಾಗಿದ್ದು, ಶೀಘ್ರವೇ ಕಿಡಿಗೇಡಿಗಳ ಪತ್ತೆಹಚ್ಚಿ ಕಾನೂನು ಕ್ರಮ ಕೈಗೊಳ್ಳುವಂತೆ ಮನವಿ ಮಾಡಲಾಗಿದೆ. ಹೋಂ ಸ್ಟೇ ಮತ್ತು ರೆಸಾರ್ಟ್ ಗಳಿಂದ ತ್ಯಾಜ್ಯ ಹಾಗೂ ಮಾನವ ಮಲವನ್ನು ಕಬಿನಿ ಹಿನ್ನೀರಿಗೆ ಹರಿಯಬಿಡಲಾಗುತ್ತಿದೆ ಎಂಬ ಸುದ್ದಿ ಸಾಮಾಜಿಕ ಜಾಲತಾಣಗಳಲ್ಲಿ ಹಾಗೂ ಕೆಲ ಮಾಧ್ಯಮಗಳಲ್ಲಿ ಹರಿದಾಡುತ್ತಿದೆ. ಇದು ಸತ್ಯಕ್ಕೆ ದೂರವಾದದ್ದು. ತ್ಯಾಜ್ಯವನ್ನು ತಂದು ಸುರಿದಿರುವುದು ನಿಜ. ಆದರೆ ಅದು ಕಬಿನಿ ಹಿನ್ನೀರನ್ನು ಸೇರಿಲ್ಲ. ಕೇವಲ 20 ಮೀಟರ್ ನಷ್ಟೇ ದೂರ ಹರಿದಿದೆಯಷ್ಟೆ, ತ್ಯಾಜ್ಯ ಸುರಿದಿರುವ ಸ್ಥಳಕ್ಕೂ, ಕಬಿನಿ ನೀರು ಇರುವ ಸ್ಥಳಕ್ಕೂ ಅಂದಾಜು 100 ಮೀಟರ್ ದೂರ ಇದೆ. ಹೀಗಾಗಿ ಸುಳ್ಳು ಸುದ್ದಿ ಹಬ್ಬಿಸಿ, ಜನರಲ್ಲಿ ಆತಂಕ ಸೃಷ್ಟಿಸಬಾರದು ಎಂದು ರಂಗಯ್ಯ ಮನವಿ ಮಾಡಿದರು.

# ಮಾದಕ ವ್ಯಸನಮುಕ್ತ ಸಮಾಜ ನಿರ್ಮಾಣ ನಮ್ಮೆಲ್ಲರ ಜವಾಬ್ದಾರಿ :ಪಿಎಸೈ

■ ಉದಯರಶ್ಮಿ ದಿನಪತ್ರಿಕೆ



ದೇವರಹಿಪ್ಪರಗಿ: ಮಾದಕ ವ್ಯಸನಮುಕ್ತ ಸಮಾಜದ ನಿರ್ಮಾಣ ನಮ್ಮೆಲ್ಲರ ಜವಾಬ್ದಾರಿಯಾಗಿದೆ ಎಂದು ಪಿಎಸ್ಐ ಸಚೀನ ಆಲಮೇಲಕರ ಹೇಳಿದರು.

ಪಟ್ಟಣದ ಬಿಎಲ್ ಡಿಇ ಸಂಸ್ಥೆಯ ಎ.ಬಿ.ಸಾಲಕ್ಕಿ ಪದವಿಪೂರ್ವ ಕಾಲೇಜಿನಲ್ಲಿ ಸೋಮವಾರ ಮಾದಕ ದ್ರವ್ಯ ದುರ್ಬಳಕೆ ಮತ್ತು ಅಕ್ರಮ ಸಾಗಾಣಿಕೆ ವಿರೋಧಿ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದರು.

ಇಂದಿನ ಯುವಜನತೆ ತಾವು ಮಾದಕ ವಸ್ತುಗಳ ವ್ಯಸನಿಗಳಾಗಿ ಜೀವನ ಹಾಳು ಮಾಡಿಕೊಳ್ಳಬಾರದು. ಅದಕ್ಕಾಗಿ ಮಾದಕ ಪದಾರ್ಥಗಳ ಸೇವನೆಯ ಅಪಾಯಗಳ ಕುರಿತು ವಿಶೇಷ ಎಚ್ಚರಿಕೆ ವಹಿಸಿ ದೂರವಿರಬೇಕು. ಇಂದು ಮಾದಕ ಪದಾರ್ಥಗಳಾದ ಗಾಂಜಾ ಮಿಶ್ರಿತ ಮಾವಾ, ತಂಬಾಕು, ಗುಟುಕಾಗಳು ವ್ಯಕ್ತಿಯ ಮೆದುಳು ಮತ್ತು ನಡುವಳಿಕೆಯ ಮೇಲೆ ನೇರ ಪರಿಣಾಮ ಬೀರಿ ಅವನನ್ನು ಮಾನಸಿಕ ಅಸ್ವಸ್ಥನನ್ನಾಗಿ ಮಾಡುತ್ತವೆ. ಜೊತೆಗೆ ಕುಟುಂಬದ ಆರ್ಥಿಕ ನಷ್ಟಕ್ಕೆ ಕಾರಣವಾಗುತ್ತದೆ. ಆದ್ದರಿಂದ ಮನೆಯಲ್ಲಿ ತಂದೆ, ಸಹೋದರ ಯಾರೇ ಆಗಿರಲಿ ಅವರಿಗೆ ಮಾದಕ ಪದಾರ್ಥಗಳ ಬಳಕೆಯಿಂದಾಗುವ ಕೆಡುಕುಗಳ ಈ ಬಗ್ಗೆ ಮಾಹಿತಿ ನೀಡಿ ದೂರವಿರಿಸಲು ತಾವು ಪ್ರಯತ್ನಿಸಬೇಕು ಎಂದರು. ಇದೇ ಸಂದರ್ಭದಲ್ಲಿ ಮಾದಕ ದ್ರವ್ಯ ದುರ್ಬಳಕೆ ಮತ್ತು ಸಮಾಜದಲ್ಲಿ ಬಳಕೆಯಿಂದಾಗುವ ದುಷ್ಪರಿಣಾಮಗಳ ಕುರಿತಾದ ಭಿತ್ತಿಚಿತ್ರಗಳಗಳನ್ನು ಪ್ರದರ್ಶಿಸಿ ಘೋಷಣೆಗಳ ಮೂಲಕ ಅರಿವು ಮೂಡಿಸಲಾಯಿತು.

ಪ್ರಾಚಾರ್ಯ ವ್ಹಿ.ಜಿ.ಹೂನಳ್ಳಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಸಂಕ್ಷಿಪ್ತವಾಗಿ ಮಾತನಾಡಿದರು.

ಕಾಲೇಜಿನ ಕೆ.ವ್ಹಿ.ಒಡೆಯರ್, ಸಂತೋಷ ಬಡಿಗೇರ ಪೊಲೀಸ್ ಇಲಾಖೆಯ ಸಿಬ್ಬಂದಿಗಳಾದ ಸಿದ್ದು ಗಂಗನಳ್ಳಿ, ಎಂ.ಎಸ್.ಥೋರವೆ, ಶ್ರೀಕಾಂತ ಶಿನ್ನೂರ ಹಾಗೂ ವಿದ್ಯಾರ್ಥಿ, ವಿದ್ಯಾರ್ಥಿನಿಯರು ಇದ್ದರು.

**Printed by:** AVINASH BIDARI, **Published and owned by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR